ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೫

**ಪಟ್ಟಿ – ೦೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತ ನಾಲ್ಕನೇ ಅಧಿವೇಶನ**
**ಶುಕ್ರವಾರ, ದಿನಾಂಕ : ೦೯ನೇ, ಫೆಬ್ರವರಿ, ೨೦೧೮**

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೫. ಸಾರಿಗೆ ಸಚಿವರು.

೬. ಗಣಿ ಮತ್ತು ಭೂವಿಜ್ಞಾನ ಸಚಿವರು.

೭. ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು.

---

## ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆ ಮತ್ತು ಈಶಾನ್ಯ ರಾಜ್ಯ ಸಾರಿಗೆ ಸಂಸ್ಥೆಗಳಲ್ಲಿ ೩೭೧(ಜೆ) ಅಡಿಯಲ್ಲಿ ಮೀಸಲಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೫೧ (೩೨೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ಈಶಾನ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಮೇಲ್ಕಂಡ ಎರಡು ಸಂಸ್ಥೆಗಳಲ್ಲಿ ಸಂವಿಧಾನದ ಕಲಂ ೩೭೧(ಜೆ) ಅಡಿಯಲ್ಲಿ ಹುದ್ದೆಗಳಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ; ಇದ್ದರೆ, ಹುದ್ದೆವಾರು ಮಾಹಿತಿ ನೀಡುವುದು;

(ಇ) ಇಲ್ಲಿಯವರೆಗೆ ಸದರಿ ಎರಡು ಸಂಸ್ಥೆಗಳಲ್ಲಿ ಸಂವಿಧಾನದ ಕಲಂ ೩೭೧(ಜೆ) ಅಡಿಯಲ್ಲಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿದೆಯೇ; ಇದ್ದರೆ, ಕಳೆದ ಎರಡು ವರ್ಷಗಳಲ್ಲಿ ನೇಮಕಾತಿ ಆದೇಶ ನೀಡಿದ ಸಂಖ್ಯೆ ಎಷ್ಟು; (ಹುದ್ದೆವಾರು ಮಾಹಿತಿ ನೀಡುವುದು)

(ಈ) ಪ್ರಸ್ತುತ ಈಶಾನ್ಯ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? (ಮಾಹಿತಿ ನೀಡುವುದು)

## “ರಾಜೀವ್ ಗಾಂಧಿ ಚೈತನ್ಯ ಯೋಜನೆ” ಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೫೨ (೩೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಶಾನ್ಯ ಪದವೀಧರ ಕ್ಷೇತ್ರಗಳಲ್ಲಿ ಗ್ರಾಮೀಣ ಯುವಜನರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಸ್ವ–ಉದ್ಯೋಗಿಗಳನ್ನಾಗಿ ಮಾಡುವ "ರಾಜೀವ್ ಗಾಂಧಿ ಚೈತನ್ಯ ಯೋಜನೆ" ಅಡಿಯಲ್ಲಿ ಇದುವರೆವಿಗೂ ಸರ್ಕಾರ ಯಾವ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಎಷ್ಟು ಯುವಜನರು ಈ ಯೋಜನೆಯಡಿ ಸ್ವ–ಉದ್ಯೋಗಿಗಳಾಗಿದ್ದಾರೆ, ಯಾವ ಯಾವ ವೃತ್ತಿಗಳಲ್ಲಿ ಪರಿಣಿತರಾಗಿ ಉದ್ಯೋಗದಲ್ಲಿದ್ದಾರೆ; ಪ್ರಸ್ತುತ ಈ ಯೋಜನೆ ಪ್ರಗತಿಯಲ್ಲಿದೆಯೇ; (ವಿವರ ನೀಡುವುದು)

(ಇ) ಸದರಿ "ರಾಜೀವ್ ಗಾಂಧಿ ಚೈತನ್ಯ ಯೋಜನೆ" ಕ್ರಿಯಾಶೀಲವನ್ನಾಗಿ ಮಾಡಲು ಹಾಗೂ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಛೇರಿಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೫೩ (೩೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಛೇರಿಯಲ್ಲಿ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ; (ವೃಂದವಾರು, ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡದೆ ಇರುವುದಕ್ಕೆ ಕಾರಣವೇನು; ಇದರಿಂದಾಗಿ ಸಮಯಕ್ಕೆ ಸರಿಯಾಗಿ ಕಛೇರಿ ಕಾರ್ಯಗಳು ಆಗದೆ ಹೈದ್ರಾಬಾದ್ ಕರ್ನಾಟಕ ಭಾಗದ ಜಿಲ್ಲೆಗಳ ಶಿಕ್ಷಕರು ಪರದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ, ಯಾವ ಕಾಲ ಮಿತಿಯೊಳಗೆ ಭರ್ತಿ ಮಾಡಲಾಗುವುದು? (ಮಾಹಿತಿ ನೀಡುವುದು)

## ಈಶಾನ್ಯ ಪದವೀಧರರ ಕ್ಷೇತ್ರದಲ್ಲಿ ಶಿಕ್ಷಕರ ನೇಮಕಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೫೪ (೩೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಶಾನ್ಯ ಪದವೀಧರ ಕ್ಷೇತ್ರದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರ ಖಾಲಿ ಇರುವ ಹುದ್ದೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರ ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಇ) ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿ ೩೭೧ (ಜೆ) ಅಡಿಯಲ್ಲಿ ಮೀಸಲಾತಿಯನ್ನು ಒದಗಿಸಿ ನೇಮಕಾತಿ ಪ್ರಕ್ರಿಯೆ ಮಾಡಲು ಸರ್ಕಾರ ಮುಂದಾಗುವುದೇ? (ಹುದ್ದೆವಾರು ಮಾಹಿತಿ ನೀಡುವುದು)

# ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅಕ್ರಮ ಹಣ ವರ್ಗಾವಣೆ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೫ (೩೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತದ (KRIDL) ನಲ್ಲಿ ೫೫ ಕೋಟಿ ರೂಪಾಯಿ ಠೇವಣಿಯ ಅಕ್ರಮ ವರ್ಗಾವಣೆ ನಡೆದಿರುವುದು ನಿಜವೇ;

(ಆ) ಈ ಪ್ರಕರಣದಲ್ಲಿ ಮೂವರು ಹಿರಿಯ ಅಧಿಕಾರಿಗಳು ಶಾಮೀಲಾಗಿರುವುದು ನಿಜವೇ; ಹಾಗಿದ್ದಲ್ಲಿ, ಇವರುಗಳ ಮೇಲೆ ಕೈಗೊಂಡ ಕ್ರಮವೇನು; ಇವರುಗಳ ಆಸ್ತಿಗಳಿಕೆಯ ವಿವರ ನೀಡುವುದು;

(ಇ) ಕೋರಮಂಗಲದ ವಿಜಯ ಬ್ಯಾಂಕ್ ಶಾಖೆ ನೀಡಿರುವ ಮಾಹಿತಿಯಿಂದ ಈ ಪ್ರಕರಣ ಬೆಳಕಿಗೆ ಬಂದಿರುವುದು ನಿಜವೇ; ಹಾಗಿದ್ದಲ್ಲಿ, ಇಂತಹ ಅನೇಕ ಪ್ರಕರಣಗಳು ನಡೆದಿರುವ ಸಂಶಯದ ಹಿನ್ನೆಲೆಯಲ್ಲಿ ತನಿಖೆ ಮಾಡಿ ಹೆಚ್ಚಿನ ಪ್ರಕರಣಗಳಲ್ಲಿ ಅಕ್ರಮವಾಗಿ ಹಣ ವರ್ಗಾವಣೆಯಾಗಿರುವ ಸತ್ಯ ಸಂಗತಿಯನ್ನು ಬೆಳಕಿಗೆ ತಂದು ತಪ್ಪಿತಸ್ಥರ ಮೇಲೆ ಕಠಿಣಕ್ರಮ ಜರುಗಿಸಲು ಸರ್ಕಾರ ಮುಂದಾಗುವುದೇ; (ವಿವರ ನೀಡುವುದು)

(ಈ) ಆರ್.ಡಿ.ಪಿ.ಆರ್ ಇಲಾಖೆಯಲ್ಲಿ ಇಂತಹ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಈ ಭ್ರಷ್ಟಚಾರಕ್ಕೆ ಹೊಣೆಗಾರರು ಯಾರು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

## ಭಾರಿ ಮೊತ್ತದ ಅದಿರು ಕಳ್ಳ ಸಾಗಾಣಿಕೆಯಾಗಿರುವ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೬ (೩೮೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿಯ ಸಂಡೂರಿನಿಂದ ₹.೫,೪೫೦ ಕೋಟಿ ಬೃಹತ್ ಮೊತ್ತದ ಅದಿರು ಕಳ್ಳ ಸಾಗಣೆಯಾಗಿರುವ ಪ್ರಕರಣ ಎಂ.ಎಂ.ಎಲ್ ಆಂತರಿಕ ತನಿಖೆಯಿಂದ ಬಹಿರಂಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅಧಿಕಾರಿಗಳ ಮಾರ್ಗದರ್ಶನದಲ್ಲೇ ಈ ಅಕ್ರಮ ನಡೆದಿರುವುದು ನಿಜವೆ; ಹಾಗಿದ್ದಲ್ಲಿ, ಈ ಅಧಿಕಾರಿಗಳ ಹೆಸರು, ಹುದ್ದೆ ವಿವರ ನೀಡುವುದು;

(ಇ) ತನಿಖೆಯ ವೇಳೆಯಲ್ಲಿ ಕೆಳಹಂತದ ಅಧಿಕಾರಿಗಳು ಹಿರಿಯ ಅಧಿಕಾರಿಗಳ ನಿರ್ದೇಶನದಂತೆ ಕೆಲಸ ಮಾಡಿರುವುದಾಗಿ ಹೇಳಿಕೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)

(ಈ) ಎಂ.ಎಂ.ಎಲ್ ವ್ಯವಸ್ಥಾಪಕ ನಿರ್ದೇಶಕರು, ಹಗರಣ ಬಯಲಿಗೆಳೆಯುವ ಭಯದಿಂದ ಅವರನ್ನು ಹುದ್ದೆಯಲ್ಲಿ ಹೆಚ್ಚು ಕಾಲ ಇರಲು ಬಿಡದೆ ವರ್ಗಾವಣೆ ಮಾಡಿರುವುದು ನಿಜವೆ;

(ಉ) ₹. ೫,೪೫೦ ಕೋಟಿ ಬೃಹತ್ ಮೌಲ್ಯದ ಅದಿರು ಕಳ್ಳ ಸಾಗಣೆಯ ಪ್ರಕರಣವನ್ನು ಉನ್ನತ ಮಟ್ಟದ ತನಿಖೆಗೆ ವಹಿಸಿ, ತನಿಖೆ ಮಾಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ? (ವಿವರ ನೀಡುವುದು)

## ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಸರ್ಕಾರದ ಹಣ ದುರುಪಯೋಗ ಆಗಿರುವ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೭ (೩೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಾನಾ ಯೋಜನೆಗಳಿಗೆ ಬಿಡುಗಡೆಯಾದ ಸರ್ಕಾರದ ಹಣವನ್ನು ಬೇರೆ ಬೇರೆ ಬ್ಯಾಂಕ್ ಖಾತೆಗಳಿಗೆ ಅಕ್ರಮವಾಗಿ ಜಮಾ ಮಾಡಿ ಖಜಾನೆಯ ನೂರಾರು ಕೋಟಿ ರೂ ಲಪಟಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು; (ವಿವರ ನೀಡುವುದು)

(ಆ) ಸದರಿ ಅಕ್ರಮಗಳಲ್ಲಿ ಹಣ ವರ್ಗಾಯಿಸಿರುವ ಬ್ಯಾಂಕ್ ಖಾತೆಗಳ ವಿವರ ನೀಡುವುದು; ಹಾಗೂ ಪಾವತಿಸಿರುವ ಹಣವೆಷ್ಟು;

(ಇ) ಈ ಖಾತೆಗಳು ಯಾರ ಯಾರ ಹೆಸರಿನಲ್ಲಿವೆ; (ವಿಳಾಸದೊಂದಿಗೆ ಪೂರ್ಣ ವಿವರ ನೀಡುವುದು)

(ಈ) ಈ ಅಕ್ರಮದಲ್ಲಿ ಶಾಮೀಲಾಗಿರುವ ಅಧಿಕಾರಿಗಳು ಯಾರು; ಇವರ ಆಸ್ತಿ ಗಳಿಕೆಯ ಮೊತ್ತವೆಷ್ಟು;

(ಉ) ಈ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಕೆ.ಎ.ಎಸ್ ಮತ್ತು ಐ.ಎ.ಎಸ್ ಖಾಸಗಿ ತರಬೇತಿ ಸಂಸ್ಥೆಗಳ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೮ (೩೮೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಎ.ಎಸ್ ಮತ್ತು ಐ.ಎ.ಎಸ್ ಪರೀಕ್ಷೆಯ ಪೂರ್ವಭಾವಿ ತಯಾರಿಕೆಗೆ ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ತರಬೇತಿ ಸಂಸ್ಥೆಗಳೆಷ್ಟು; (ಕೋಚಿಂಗ್ ಸೆಂಟರ್)(ಹೆಸರು ವಿಳಾಸದೊಂದಿಗೆ ವಿವರ ನೀಡುವುದು)

(ಆ) ಪ್ರತಿ ತರಬೇತಿ ಕೇಂದ್ರಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡಲಾಗಿದೆ; (ಮಾಹಿತಿ ನೀಡುವುದು)

(ಇ) ಈ ಸಂಸ್ಥೆಗಳು ಸರ್ಕಾರದಿಂದ ಅನುಮತಿ ಪಡೆದುಕೊಂಡಿವೆಯೇ; ಹಾಗಿದ್ದಲ್ಲಿ ವಿವರ ನೀಡುವುದು;

(ಈ) ಈ ತರಬೇತಿಯ ಆಕಾಂಕ್ಷಿಗಳಿಗೆ ಯಾವ ಯಾವ ವಿಷಯದಲ್ಲಿ ಬೋಧನೆ ಮಾಡಲಾಗುತ್ತಿದೆ; ಇದಕ್ಕೆ ಸಂಬಂಧಿಸಿದಂತೆ ಬೋಧಕರ ಮಾಹಿತಿ ನೀಡುವುದು;

(ಉ) ತರಬೇತಿಗೆ ಈ ಸಂಸ್ಥೆಗಳು ಪ್ರತಿ ವಿದ್ಯಾರ್ಥಿಗಳಿಂದ ಸಂಗ್ರಹಿಸುತ್ತಿರುವ ವಾರ್ಷಿಕ ಶುಲ್ಕ ಎಷ್ಟು; (ವಿವರ ನೀಡುವುದು)

(ಊ) ಈ ಪರೀಕ್ಷೆಯ ಅಭ್ಯರ್ಥಿಗಳಿಗೆ (ಸ್ಟಡಿ ಮೆಟೀರಿಯರ್) ಒದಗಿಸಲಾಗುತ್ತಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಋ) ಕಳೆದ ನಾಲ್ಕು ವರ್ಷಗಳಿಂದ ಪ್ರತಿ ತರಬೇತಿ ಕೇಂದ್ರದಲ್ಲಿ ತರಬೇತಿ ಹೊಂದಿ ಕೆ.ಎ.ಎಸ್ ಮತ್ತು ಐ.ಎ.ಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕೆಲಸ ನಿರ್ವಹಿಸುತ್ತಿರುವ ಡಿ.ಗ್ರೂಪ್ ನೌಕರರನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೫ (೩೮೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆನ್‌ಸ್ಕಿಲ್ಡ್ 'ಡಿ' ಗ್ರೂಪ್ ನೌಕರರುಗಳಾಗಿ ಕೆಲಸ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; (ಕಾಲೇಜುವಾರು ವಿವರ ನೀಡುವುದು)

(ಆ) ಕಾಲೇಜು ಶಿಕ್ಷಣ ಇಲಾಖೆಯುವರ ಆದೇಶ ಸಂಖ್ಯೆ:ಕಾಶಿಇ:೨೭೯:ಆನ್‌ಸ್ಕಿಲ್ಡ್:ಡಿದನೌನೇ:ಸಿವಿ೨:೨೦೦೨, ದಿನಾಂಕ: ೦೫.೧೨.೨೦೦೩ರ ಪ್ರಕಾರ ಸಾದಿಲ್ವಾರು ವೆಚ್ಚದಡಿ ಈ ನೌಕರರುಗಳನ್ನು ಸರ್ಕಾರ ನೇಮಕಾತಿ ಮಾಡಿಕೊಂಡಿರುವುದು ನಿಜವೇ; ಹಾಗಿದ್ದಲ್ಲಿ ವಿವರ ನೀಡುವುದು;

(ಇ) ಸದರಿ ನೌಕರರುಗಳನ್ನು ಖಾಯಂ ಮಾಡುವ ಬಗ್ಗೆ ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ ವಿವರ ನೀಡುವುದು;

(ಈ) ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ: ೩೧.೦೭.೨೦೧೫ರಂದು ಈ ನೌಕರರುಗಳನ್ನು ದಿನಗೂಲಿ ನೌಕರರೆಂದು ಪರಿಗಣಿಸಿ, ಕನಿಷ್ಠ ವೇತನ ನೀಡಲು ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಉ) ಈ ನೌಕರರುಗಳು ಕಳೆದ ೧೫–೨೦ ವರ್ಷಗಳಿಂದ ಸತತವಾಗಿ ಸೇವೆ ಸಲ್ಲಿಸುತ್ತಿದ್ದರೂ ಸಹ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ:೩ಟಿಎಪ್‌ಪಿ:೨೦೧೭ರ ಪ್ರಕಾರ ಕೆಲಸದಿಂದ ಸ್ಥಗಿತಗೊಳಿಸಲು ಆದೇಶಿಸಿರುವುದು ನಿಜವೇ;

(ಊ) ಹಾಗಿದ್ದಲ್ಲಿ, ಈ ನೌಕರರುಗಳ ಸುಧೀರ್ಘ ಸೇವೆಯನ್ನು ಪರಿಗಣಿಸಿ, ದಿನಗೂಲಿ ನೌಕರರೆಂದು ಪರಿಗಣಿಸಿ ಕನಿಷ್ಠ ವೇತನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)

## ಭಾಷಿಕ ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳ ಸಮಸ್ಯೆಗಳ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೬೦ (೩೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಭಾಷಿಕ ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳಿಗೆ ಕೊಡಮಾಡಿರುವಂತಹ ರಿಯಾಯಿತಿ, ವಿನಾಯಿತಿ ಹಾಗೂ ವಿಶೇಷ ಸೌಲಭ್ಯಗಳು ಯಾವುವು;

(ಆ) ಭಾಷಿಕ ಅಲ್ಪ ಸಂಖ್ಯಾತ ಶಾಲೆಗಳಿಗೆ ರೋಸ್ಟರ್ ವಿನಾಯಿತಿ ಕೊಡುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳು ಯಾವುವು;

(ಇ) ಭಾಷಿಕ ಅಲ್ಪ ಸಂಖ್ಯಾತ ಶಾಲೆಗಳಲ್ಲಿ ಇರುವ ವಿದ್ಯಾರ್ಥಿ ಶಿಕ್ಷಕರ ಅನುಪಾತ ಎಷ್ಟು? (ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜು ಒಳಗೊಂಡಂತೆ ವಿವರ ನೀಡುವುದು)

## ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೬೧ (೩೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೭-೧೮ನೇ ಸಾಲಿನಲ್ಲಿ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ನಡೆಸಲಾಗಿದೆಯೇ; ನಡೆಸಿದ್ದರೆ, ಎಷ್ಟು ಜನ ಶಿಕ್ಷಕರಿಗೆ ವರ್ಗಾವಣೆ ಸೌಲಭ್ಯ ಕಲ್ಪಿಸಲಾಗಿದೆ; ನಡೆಸದಿದ್ದರೆ, ಯಾವ ಕಾರಣಕ್ಕಾಗಿ ನಡೆಸಲಾಗಿಲ್ಲ;

(ಆ) ಇದರಿಂದ ಶಿಕ್ಷಕರು, ತೀವ್ರ ಹತಾಶರಾಗಿದ್ದು ಶಿಕ್ಷಣದ ಗುಣಮಟ್ಟದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವುದಿಲ್ಲವೇ; ಇದಕ್ಕೆ ಹೊಣೆಗಾರರು ಯಾರು;

(ಇ) ಹೊಸದಾಗಿ ವರ್ಗಾವಣೆ ಕಾನೂನು ತಿದ್ದುಪಡಿ ಮಾಡಲಾಗಿದೆಯೇ; ಅದರಲ್ಲಿರುವಂತಹ ಮುಖ್ಯ ಅಂಶಗಳೇನು; ಹೊಸ ಅಂಶಗಳು ಯಾವುವು; (ಪ್ರತಿ ನೀಡುವುದು)

(ಈ) ಹೊಸದಾಗಿ ರಚಿಸಿರುವ ನಿಯಮಗಳು ಯಾವುವು; (ಪ್ರತಿ ನೀಡುವುದು)

(ಉ) ಹೊರಡಿಸಿರುವ ಮಾರ್ಗಸೂಚಿಗಳೇನು; (ಪ್ರತಿ ನೀಡುವುದು)

(ಊ) ಕಾನೂನು ನಿಯಮ ಮಾರ್ಗಸೂಚಿಗಳಿಗೂ ಸಾಫ್ಟ್‌ವೇರ್‌ನಲ್ಲಿ ಅಳವಡಿಸಿಕೊಂಡಿರುವ ಅಂಶಗಳಿಗೂ ಪರಸ್ಪರ ವೈರುಧ್ಯವಿದೆ ಎನ್ನುವ ಆಕ್ಷೇಪಗಳು ಶಿಕ್ಷಕರಿಂದ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಋ) ಪ್ರಸ್ತುತ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಗೆ ಕೌನ್ಸಿಲಿಂಗ್ ನಡೆಸುವುದು ಯಾವಾಗ; ಯಾವ ಕಾಲಮಿತಿಯೊಳಗೆ ಈ ಪ್ರಕ್ರಿಯೆ ಮುಗಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)

## ೧೯೯೫ರ ನಂತರ ಅರಂಭವಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೊಳಪಡಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೬೨ (೩೧೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಈಗಾಗಲೇ ೧೯೯೫ರವರೆಗಿನ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕಾರ್ಯವು

ಚಾಲ್ತಿಯಲ್ಲಿದ್ದು ಈವರೆವಿಗೂ ಎಷ್ಟು ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆ; (ಬಾಕಿ ಇರುವ ಶಾಲಾ ಕಾಲೇಜುಗಳ ವಿವರಗಳನ್ನು ನೀಡುವುದು)

(ಆ) ೧೯೯೫ರ ನಂತರದಿಂದ ೨೦೧೭ರವರೆಗೆ ಆರಂಭವಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮವೇನು; ಇದರಿಂದ ಸರ್ಕಾರಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು; ಮುಂಬರುವ ಆಯವ್ಯಯದಲ್ಲಿ ಈ ಕುರಿತು ಕ್ರಮ ಕೈಗೊಳ್ಳಲು ಸರ್ಕಾರ ಉದ್ದೇಶಿಸಿದೆಯೇ; ಉದ್ದೇಶಿಸಿದ್ದರೆ, ಯಾವ ವರ್ಷದವರೆಗೆ ಅನುದಾನ ನೀಡುವುದನ್ನು ನಿರೀಕ್ಷಿಸಬಹುದು;

(ಇ) ಎಷ್ಟು ಶಾಲಾ ಕಾಲೇಜುಗಳಿಗೆ ಅನುದಾನ ಒದಗಿಸಬಹುದಾಗಿದೆ?

## ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೬೩ (೩೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಯಾವ ವರ್ಷದವರೆಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ; (ಪ್ರತಿಯೊಂದರ ಆದೇಶದ ಪ್ರತಿ ನೀಡುವುದು)

(ಆ) ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿ ಆದೇಶ ಹೊರಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ವಿಧಿಸಿರುವ ಷರತ್ತುಗಳು ಹಾಗೂ ಅದಕ್ಕಿರುವ ನಿಯಮಾವಳಿಗಳು ಯಾವುವು;

(ಈ) ಈ ನಿಯಮಾವಳಿಗಳ ಕಾರಣಕ್ಕಾಗಿ ಹುದ್ದೆ ಖಾಲಿ ಇದ್ದರೂ ಕೂಡ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗುತ್ತಿಲ್ಲ, ಇದರಿಂದ ಶಿಕ್ಷಣ ಸಂಸ್ಥೆಗಳಿಗೆ ಅಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಶಿಕ್ಷಕರ ಹಾಗೂ ಪದವೀಧರರ ಮತಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರು ಹೋರಾಟ ಮಾಡಿದ ಹಿನ್ನೆಲೆಯಲ್ಲಿ ಈ ನೇಮಕಾತಿಗಾಗಿ ವಿಧಿಸಿರುವ ಷರತ್ತುಗಳನ್ನು ಸಡಿಲಿಸಲು/ಸರಳೀಕೃತಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಪ್ರೌಢ ಶಾಲೆಗಳು ಹಾಗೂ ಪಿ.ಯು. ಕಾಲೇಜುಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೬೪ (೩೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭-೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಮಂಜೂರಾಗಿರುವ ಪ್ರೌಢ ಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಬೇಕಾಗಿರುವ ಕಟ್ಟಡಗಳ ನಿರ್ಮಾಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ನಿರ್ಮಿಸಿರುವ ಮನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೬೫ (೩೦೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದ ಯರಮರಸ್, ಪೋತಗಲ್ ಗ್ರಾಮಗಳಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಬಡಾವಣೆಯಲ್ಲಿ ನಿರ್ಮಿಸಿರುವ ಮನೆಗಳ ಸಂಖ್ಯೆ ಎಷ್ಟು ; ಇದಕ್ಕೆ ಖರ್ಚಾಗಿರುವ ಹಣ ಎಷ್ಟು ;

(ಆ) ಸದರಿ ಮನೆಗಳನ್ನು ಹಂಚಿಕೆ ಮಾಡಲು ಅನುಸರಿಸುವ ನಿಯಮಗಳೇನು ?

## ರಾಯಚೂರು ಜಿಲ್ಲೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೬೬ (೩೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ವಿವಿಧ ಯೋಜನೆಗಳು ಯಾವುವು ;

(ಆ) ಮಂಜೂರಾತಿಯಾಗಿರುವ ಯೋಜನೆಗಳಿಗೆ ಸರ್ಕಾರ ನೀಡಿರುವ ಅನುದಾನ ಎಷ್ಟು ;

(ಇ) ಅಲ್ಪಸಂಖ್ಯಾತರ ಸಮುದಾಯದಲ್ಲಿ ಬರುವ ನದಾಫ್ (ಪಿಂಜಾರ್) ಸಮುದಾಯದ ಜನರ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರಿನಲ್ಲಿ ವಿಶ್ವವಿದ್ಯಾಲಯ ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೬೭ (೩೦೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿ ನೂತನ ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರಿನಲ್ಲಿ ಇರುವ ಸರ್ಕಾರಿ ಇಂಜಿನೀಯರಿಂಗ್ ಕಾಲೇಜಿನ ಕಟ್ಟಡ ಕಾಮಗಾರಿ ಪೂರೈಸಲು ಹಾಗೂ ಇದಕ್ಕೆ ಬೇಕಾಗಿರುವ ಸಾಮಗ್ರಿಗಳನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಮಾನ್ವಿ ಪಟ್ಟಣದಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೬೮ (೩೦೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ ;

(ಆ) ಗಿಣಿಗೇರಾ–ರಾಯಚೂರು ರೈಲ್ವೆ ಮಾರ್ಗವನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಸರ್ಕಾರಿ/ಅನುದಾನಿತ/ಅಡ್‌ಹಾಕ್ ಚಿತ್ರಕಲಾ/ಚಿತ್ರಕಲಾ ಮಹಾವಿದ್ಯಾಲಯಗಳಿಗೆ ಏಕರೂಪದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಜಾರಿಗೆ ತರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೬೯ (೪೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅನುದಾನಿತ/ಅಡ್‌ಹಾಕ್ ಚಿತ್ರಕಲಾ ಶಾಲೆ/ಚಿತ್ರಕಲಾ ಮಹಾವಿದ್ಯಾಲಯಗಳನ್ನು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಈ ಸಿಬ್ಬಂದಿಗಳಿಗೆ ಬೇರೆ ಬೇರೆ ವೃಂದ ಮತ್ತು ನೇಮಕಾತಿ ನಿಯಮಗಳು ಪ್ರಸ್ತುತ ಜಾರಿಯಲ್ಲಿರುವುದು ನಿಜವೇ ;

(ಇ) ಬೇರೆ ಬೇರೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಮಾರ್ಪಡಿಸಿ ಏಕರೂಪದ ವೃಂದ ಮತ್ತು ನೇಮಕಾತಿ ನಿಯುಮಗಳನ್ನು ರೂಪಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ ;

(ಈ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಹಾಕಿಕೊಂಡ ಕಾಲಮಿತಿ ಯಾವುದು ?

## ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದ ಗುತ್ತಿಗೆ ನೌಕರರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೭೦ (೩೧೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರಿ ಸ್ವಾಮ್ಯದ ಉದ್ಯಮವಾದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕ ಹೊಂದಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು ;

(ಆ) ಈ ನೌಕರರ ಹುದ್ದೆ ಹಾಗೂ ಅವರು ಕೆಲಸ ನಿರ್ವಹಿಸುತ್ತಿರುವ ಅವಧಿ ಎಷ್ಟು ; (ಸಿಬ್ಬಂದಿವಾರು ಮಾಹಿತಿ ನೀಡುವುದು)

(ಇ) ಗುತ್ತಿಗೆ ಆಧಾರಿತ ಸಿಬ್ಬಂದಿಯವರು ತಮ್ಮನ್ನು ಖಾಯಂ ಗೊಳಿಸುವಂತೆ ಆಡಳಿತ ಮಂಡಳಿ ಹಾಗೂ ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ನಿಜವೇ ;

(ಈ) ಬೇರೆ ಬೇರೆ ನಿಗಮ/ಮಂಡಳಿ/ಉದ್ದಿಮೆಗಳಲ್ಲಿ ಗುತ್ತಿಗೆ ಆಧಾರಿತ ನೌಕರರನ್ನು ಖಾಯಂಗೊಳಿಸಿದಂತೆ ಇವರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅನುದಾನಿತ ಚಿತ್ರಕಲಾ ಶಾಲೆ/ಚಿತ್ರಕಲಾ ಮಹಾವಿದ್ಯಾಲಯಗಳ ಸಿಬ್ಬಂದಿಗಳಿಗೆ ಹೆಚ್.ಆರ್.ಎಂ.ಎಸ್. ಮೂಲಕ ವೇತನ ಪಾವತಿ ಮಾಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೭೧ (೪೧೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಸಿಬ್ಬಂದಿಗಳಿಗೆ ಯಾವ ವಿಧಾನದಲ್ಲಿ ವೇತನ ಪಾವತಿ ಮಾಡಲಾಗುತ್ತಿದೆ ;

(ಇ) ಸಿಬ್ಬಂದಿಗಳಿಗೆ ಚೆಕ್ ಮೂಲಕ ವೇತನ ಪಾವತಿ ಮಾಡುತ್ತಿರುವುದರಿಂದ ಸಂಬಳ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸಿಬ್ಬಂದಿಗಳಿಗೆ ಹೆಚ್.ಆರ್.ಎಂ.ಎಸ್. ಮೂಲಕ ವೇತನ ಪಾವತಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಹೆಚ್.ಆರ್.ಎಂ.ಎಸ್. ಮೂಲಕ ವೇತನ ಪಾವತಿ ಮಾಡಲಾಗುವುದು ?

## ೧೯೯೪-೯೫ನೇ ಸಾಲಿನವರೆಗೆ ಪ್ರಾರಂಭಿಸಿದ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೭೨ (೩೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೪-೯೫ನೇ ಸಾಲಿನವರೆಗೆ ಪ್ರಾರಂಭಿಸಿದ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಬಾಕಿ ಇರುವ ಕಡತಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಡತಗಳು ಯಾವ ಹಂತದಲ್ಲಿವೆ ; ಯಾವ ಯಾವ ಕಛೇರಿಯಲ್ಲಿ ಬಾಕಿ ಇವೆ ; (ಕಛೇರಿವಾರು ಮಾಹಿತಿ ನೀಡುವುದು)

(ಇ) ಸದರಿ ಕಡತಗಳನ್ನು ಇತ್ಯರ್ಥಪಡಿಸಲು ಸರ್ಕಾರ ಯಾವುದಾದರೂ ನಿರ್ಧಿಷ್ಟವಾದ ದಿನಾಂಕವನ್ನು ನಿಗದಿಪಡಿಸಿದೆಯೇ ;

(ಈ) ಹಾಗಿದ್ದಲ್ಲಿ, ಈ ಕಡತಗಳಿಗೆ ಮುಕ್ತಿ ನೀಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಸ್ಥಳಾಂತರ ಹಸ್ತಾಂತರ ಮತ್ತು ಬೇರ್ಪಟ್ಟ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೨೭೩ (೪೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸ್ಥಳಾಂತರ ಹಸ್ತಾಂತರ ಹಾಗೂ ಬೇರ್ಪಟ್ಟ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸ್ಥಳಾಂತರ, ಹಸ್ತಾಂತರ ಹಾಗೂ ಬೇರ್ಪಟ್ಟ ಎಷ್ಟು ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ ; (ವರ್ಷಾವಾರು, ಜಿಲ್ಲಾವಾರು ವೇತನಾನುದಾನಕ್ಕೆ ಒಳಪಡಿಸಲಾಗಿದ್ದ ಪೂರ್ಣ ಮಾಹಿತಿ ನೀಡುವುದು)

(ಇ) ಸ್ಥಳಾಂತರ ಹಸ್ತಾಂತರ ಹಾಗೂ ಬೇರ್ಪಟ್ಟ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದೆಯೇ ; (ಆದೇಶ ಸಂಖ್ಯೆ ಹಾಗೂ ದಿನಾಂಕ ತಿಳಿಸುವುದು)

(ಈ) ಈ ಆದೇಶ ಬರುವುದಕ್ಕಿಂತ ಮೊದಲೇ ಇಲಾಖೆಗೆ ಹಾಗೂ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸದೇ ತಿರಸ್ಕರಿಸಲು ಕಾರಣಗಳೇನು;

(ಉ) ಸ್ಥಳಾಂತರಗೊಂಡ, ಹಸ್ತಾಂತರಗೊಂಡ ಹಾಗೂ ಬೇರ್ಪಟ್ಟ ಹಲವು ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಿ ಕೆಲವು ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸದೇ ಇರುವುದರಿಂದ ತೊಂದರೆಗೊಳಗಾಗಿರುವ ಸಿಬ್ಬಂದಿಯ ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಯಲ್ಲಿನ ಪಿ.ಎಂ.ಜಿ.ಎಸ್.ವೈ ರಸ್ತೆಗಳ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೭೪ (೩೮೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ವ್ಯಾಪ್ತಿಯಲ್ಲಿ ಪಿ.ಎಂ.ಜಿ.ಎಸ್.ವೈ. ಹಾಗೂ ನಬಾರ್ಡ್ ಯೋಜನೆಗಳಡಿ ಮಂಜೂರಾಗಿರುವ ರಸ್ತೆಗಳು ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಗಳಡಿಯಲ್ಲಿ ಶಿಥಿಲಗೊಂಡಿರುವ ರಸ್ತೆಗಳನ್ನು ಸರ್ಕಾರವು ಗುರುತಿಸಿದೆಯೇ ; ಅವುಗಳು ಯಾವುವು ; ಈ ರಸ್ತೆಗಳ ನಿರ್ವಹಣೆಯನ್ನು ಮಾಡಲು ಯಾವ ರೀತಿಯಲ್ಲಿ ಕ್ರಮ ಕೈಗೊಳ್ಳಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಈ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದಲ್ಲಿ ಯಾವ ಹಂತದಲ್ಲಿದೆ ; ಹಾಗೂ ಇದರ ಅನುಷ್ಠಾನಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಉನ್ನತ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ

**ಶ್ರೀ ಭಾನುಪ್ರಕಾಶ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೭೫ (೩೧೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಪನ್ಯಾಸಕರು ಹಾಗೂ ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದಂತಹ ಬಹುತೇಕ ಬೇಡಿಕೆಗಳ ಈಡೇರಿಕೆಗಾಗಿ ಪದವೀಧರ ಹಾಗೂ ಶಿಕ್ಷಕರ ಮತಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರು ಧರಣಿ ಹೋರಾಟ ನಡೆಸಿದ ಹಿನ್ನೆಲೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಸಭೆ ಕರೆದಿರುವುದು ನಿಜವೇ ; ಯಾವ ಯಾವ ದಿನಾಂಕಗಳಂದು ಸಭೆ ಕರೆಯಲಾಗಿತ್ತು ; ಎಲ್ಲ ಸಭೆಗಳ ನಡವಳಿಗಳನ್ನು ಒದಗಿಸುವುದು ; (ಉನ್ನತ ಶಿಕ್ಷಣ ಇಲಾಖೆ ಸಂಬಂಧಿಸಿದಂತೆ ಸಮಸ್ಯೆಗಳ ವಿವರವಾದ ಮಾಹಿತಿ ನೀಡುವುದು)

(ಆ) ಆ ಸಭೆಗಳನ್ನು ನಡೆಸಿದ ನಂತರ ಸರ್ಕಾರ ಸಮಸ್ಯೆಗಳನ್ನು ಪರಿಹರಿಸಿ ಆದೇಶಗಳನ್ನು ಹೊರಡಿಸಿದೆಯೇ ; ಆದೇಶದ ಪ್ರತಿಗಳನ್ನು ಒದಗಿಸುವುದು ;

(ಇ) ಎಲ್ಲಾ ಸಮಸ್ಯೆಗಳನ್ನು ಪರಿಹರಿಸಿ ಆದೇಶಿಸಲಾಗಿದೆಯೇ ; ಯಾವ ಯಾವ ಸಮಸ್ಯೆಗಳನ್ನು ಪರಿಹರಿಸಲಾಗಿದೆ ; ಯಾವ ಸಮಸ್ಯೆಗಳನ್ನು ಪರಿಹರಿಸಲಾಗಿಲ್ಲ ಅದಕ್ಕೆ ಕಾರಣಗಳೇನು ; ಪರಿಹರಿಸಲು ಬಾಕಿ ಇರುವ ಸಮಸ್ಯೆಗಳನ್ನು ಪರಿಹರಿಸಲಾಗುವುದು ಯಾವಾಗ ?

## ಶಿಕ್ಷಕರ ಹಾಗೂ ಶಿಕ್ಷಣ ಸಮಸ್ಯೆಗಳನ್ನು ಪರಿಹರಿಸುವ ಬಗ್ಗೆ

**ಶ್ರೀ ಭಾನುಪ್ರಕಾಶ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೭೬ (೩೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಕರು ಹಾಗೂ ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದ ಬಹುತೇಕ ಬೇಡಿಕೆಗಳ ಈಡೇರಿಕೆಗಾಗಿ ಪದವೀಧರ ಹಾಗೂ ಶಿಕ್ಷಕರ ಮತಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರು ಧರಣಿ/ಹೋರಾಟ ನಡೆಸಿದ ಹಿನ್ನೆಲೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಸಭೆ ಕರೆದಿರುವುದು ನಿಜವೇ ; ಯಾವ ಯಾವ ದಿನಾಂಕಗಳಂದು ಸಭೆ ಕರೆಯಲಾಗಿತ್ತು; ಎಲ್ಲ ಸಭೆಗಳ ನಡವಳಿಗಳನ್ನು ಒದಗಿಸುವುದು ; (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಸಮಸ್ಯೆಗಳ ವಿವರವಾದ ಮಾಹಿತಿ ನೀಡುವುದು)

(ಆ) ಆ ಸಭೆಗಳನ್ನು ನಡೆಸಿದ ನಂತರ ಸರ್ಕಾರ ಸಮಸ್ಯೆಗಳನ್ನು ಪರಿಹರಿಸಿ ಆದೇಶಗಳನ್ನು ಹೊರಡಿಸಿದೆಯೇ ; ಆದೇಶದ ಪ್ರತಿಗಳನ್ನು ಒದಗಿಸುವುದು ;

(ಇ) ಎಲ್ಲಾ ಸಮಸ್ಯೆಗಳನ್ನು ಪರಿಹರಿಸಿ ಎಂದು ಆದೇಶಿಸಲಾಗಿದೆಯೇ; ಯಾವ ಯಾವ ಸಮಸ್ಯೆಗಳನ್ನು ಪರಿಹರಿಸಲಾಗಿದೆ ; ಯಾವ

ಸಮಸ್ಯೆಗಳನ್ನು ಪರಿಹರಿಸಲಾಗಿಲ್ಲ ; ಅದಕ್ಕೆ ಕಾರಣಗಳೇನು ; ಪರಿಹರಿಸಲು ಬಾಕಿ ಇರುವ ಸಮಸ್ಯೆಗಳನ್ನು ಯಾವಾಗ ಪರಿಹರಿಸಲಾಗುವುದು ?

## ಕೆಲವು ಶೈಕ್ಷಣಿಕ ಜಿಲ್ಲೆಗಳಿಂದ ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸಿರುವ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೭೭ (೪೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಶೈಕ್ಷಣಿಕ ಜಿಲ್ಲೆಗಳಿಂದ ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಕುರಿತು ಒಟ್ಟಾರೆ ಎಷ್ಟು ಪ್ರಸ್ತಾವನೆಗಳು ಇಲಾಖೆಯಲ್ಲಿ ಸ್ವೀಕೃತವಾಗಿವೆ ;

(ಆ) ೨೦೧೭–೧೮ನೇ ಸಾಲಿನ ಡಿಸೆಂಬರ್ ಅಂತ್ಯಕ್ಕೆ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳ ಒಟ್ಟು ಎಷ್ಟು ಪ್ರಸ್ತಾವನೆಗಳನ್ನು ಅಂತಿಮ ಅನುಮೋದನೆ ನೀಡಿ ವೇತನಾನುದಾನಕ್ಕೆ ಒಳಪಡಿಸಲಾಗಿರುತ್ತದೆ ;

(ಇ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳ ಉಳಿದ ಪ್ರಸ್ತಾವನೆಗಳನ್ನು ಯಾವ ಕಾಲಮಿತಿಯೊಳಗೆ ಪರಿಶೀಲಿಸಿ ಅಂತಿಮಗೊಳಿಸಲಾಗುವುದು ;

(ಈ) ಹೆಚ್ಚಿನ ಪ್ರಸ್ತಾವನೆಗಳು ಅನುಮೋದನೆಗೊಳ್ಳದೆ ವಿಳಂಭವಾಗುತ್ತಿರುವುದಕ್ಕೆ ಕಾರಣಗಳೇನು ? (ವಿವರ ನೀಡುವುದು)

## ಕಲ್ಲು ಗಣಿಗಾರಿಕೆ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೭೮ (೪೦೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೬–೧೭ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ಕಲ್ಲು ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲ್ಲುಗಣಿಗಾರಿಕೆ ಆರಂಭಿಸಲು ಸುರಕ್ಷತಾ ವಲಯ (ಸೇಫ್ ಝೋನ್) ಎಂದು ನೀಡಲು ಇರುವ ಮಾನದಂಡಗಳೇನು ; ಅಧಿಕೃತ ಮಾಹಿತಿ ನೀಡುವುದು ;

(ಇ) ಸುರಕ್ಷತಾ ವಲಯ ಅಲ್ಲದಿದ್ದರೂ ಕೆಲವು ಕಡೆ ಕಲ್ಲು ಗಣಿಗಾರಿಕೆ ಅನಧಿಕೃತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಅವುಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಸಕಾಲಕ್ಕೆ ಹಣ ಪಾವತಿಯಾಗದೆ ರೈತರು ಆತ್ಮಹತ್ಯೆ ದಾರಿ ಹಿಡಿದಿರುವ ಕುರಿತು.

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೭೯ (೪೦೯) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭-೧೮ನೇ ಸಾಲಿನ ಡಿಸೆಂಬರ್ ಅಂತ್ಯಕ್ಕೆ ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ನೀಡಬೇಕಾಗಿರುವ ಒಟ್ಟು ಬಾಕಿ ಮೊತ್ತವೆಷ್ಟು ;

(ಆ) ಸಕ್ಕರೆ ಕಾರ್ಖಾನೆಗಳು ಸಕಾಲಕ್ಕೆ ರೈತರಿಗೆ ಹಣ ನೀಡದೆ ರೈತರು ಆತ್ಮಹತ್ಯೆಯ ದಾರಿ ಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರೈತರ ಹಿತವನ್ನು ಲೆಕ್ಕಿಸದೇ ಕೋಟಿಗಟ್ಟಲೆ ಬಾಕಿ ಉಳಿಸಿ ಕೊಂಡಿರುವ ಕಾರ್ಖಾನೆಗಳ/ಸಹಕಾರಿ ಸಂಘಗಳ ವಿರುದ್ಧ ಕ್ರಮ ವಹಿಸಲಾಗಿದೆಯೇ ; ಹಾಗಿದ್ದರೆ, ಅದರ ವಿವರ ನೀಡುವುದು ;

(ಈ) ರೈತರಿಗೆ ಯಾವ ಕಾಲಮಿತಿಯಲ್ಲಿ ಬಾಕಿ ಹಣ ದೊರಕಿಸಿ ಕೊಡಲು ಸರ್ಕಾರ ಕ್ರಮ ಕೈಗೊಂಡಿದೆ ? (ವಿವರವಾದ ಮಾಹಿತಿ ನೀಡುವುದು)

## ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-**

೨೮೦ (೩೪೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೭-೧೮ನೇ ಸಾಲ್ಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಅಂತಿಮವಾಗಿ ನೇಮಕಗೊಂಡ ಸಹಾಯಕ ಪ್ರಾಧ್ಯಾಪಕರ ಸಂಖ್ಯೆ ಎಷ್ಟು; (ವಿಷಯವಾರು ವಿವರವಾದ ಮಾಹಿತಿ ನೀಡುವುದು)

(ಆ) ಪ್ರಸ್ತುತ ಇಲಾಖೆಯಲ್ಲಿ ಕಾಲೇಜುಗಳಿಗೆ ಮಂಜೂರಾಗಿರುವ ಎಲ್ಲಾ ಹುದ್ದೆಗಳು ಭರ್ತಿಯಾಗಿವೆಯೇ ;

(ಇ) ಖಾಲಿ ಇರುವುದಾದರೆ, ಇತ್ತೀಚೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರಕಟಗೊಂಡಿರುವ ಫಲಿತಾಂಶ ಪಟ್ಟಿಯಿಂದಲೇ ಹೆಚ್ಚುವರಿ ಆಯ್ಕೆ ಪಟ್ಟಿ ಪ್ರಕಟಿಸಿ ತುಂಬಲು ಕ್ರಮ ವಹಿಸಲಾಗುವುದೇ ;

(ಈ) ಹಾಗಾದರೆ, ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆ ತುಂಬಲು ಕ್ರಮ ವಹಿಸಲಾಗುವುದು ?

## ಉಪ ರೈಲು ನಗರ ಯೋಜನೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೮೧ (೪೧೭೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರದ ಟ್ರಾಫಿಕ್ ಸಮಸ್ಯೆ ನಿವಾರಿಸುವ ಉಪ ರೈಲು ನಗರ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಯೋಚಿಸಿದೆಯೇ ;

(ಆ) ಒಂದು ಸಮೀಕ್ಷೆ ಪ್ರಕಾರ ಈ ಯೋಜನೆ ಅಳವಡಿಸಿದರೆ ಇದರಿಂದ ಸುಮಾರು ೩೫ ಲಕ್ಷ ಜನಕ್ಕೆ ಪ್ರಯೋಜನವಾಗುತ್ತೆಯೆಂದು ವರದಿಯಾಗಿದ್ದು, ಇದರ ಬಗ್ಗೆ ಸರ್ಕಾರದ ನಿಲುವೇನು ;

(ಇ) ಈ ಯೋಜನೆಗೆ ಬೇಕಾಗುವ ಹಣಕಾಸಿನಲ್ಲಿ ಕೇಂದ್ರ ಮತ್ತು ರಾಜ್ಯದ ಭಾಗವೆಷ್ಟು ;

(ಈ) ರಾಜ್ಯ ಸರ್ಕಾರ ರೈಲು ನಿಲ್ದಾಣ ಪ್ರದೇಶದಲ್ಲಿ ಫ್ಲೋರ್ ಸ್ಪೇಸ್ ಇಂಡೆಕ್ಸ್ (FSI–ಬಹುಮಹಡಿ ಕಟ್ಟಡಕ್ಕೆ ಅನುಮತಿ) ಹೆಚ್ಚಿಸಲು ನೀಡಿದರೆ ಕೇಂದ್ರ ಸರ್ಕಾರ ಪ್ರತಿಶತ ೫೦ ಭಾಗದ ಯೋಜನಾ

ವೆಚ್ಚವನ್ನು ಭರಿಸಲು ತಯಾರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳನ್ನು ಒಂದೇ ಅಧಿನಿಯಮದಲ್ಲಿ ತರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೮೨ (೩೯೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿವಿಧ ವಿಶ್ವವಿದ್ಯಾಲಯಗಳು ತಮ್ಮದೇ ಆದ ಅಧಿನಿಯಮಗಳನ್ನು ಹೊಂದಿದ್ದು, ಈ ಎಲ್ಲಾ ವಿಶ್ವವಿದ್ಯಾಲಯಗಳನ್ನು ಒಂದೇ ಅಧಿನಿಯಮದಲ್ಲಿ ತರಲು ಸರ್ಕಾರ ಯೋಚಿಸಿದೆಯೇ ;

(ಆ) ವಿಶ್ವವಿದ್ಯಾಲಯಗಳ ನಡುವೆ ನಿಯಮಗಳ ಹೊಂದಾಣಿಕೆ ಇಲ್ಲದೇ ಶಿಕ್ಷಕರ ಮತ್ತು ಶಿಕ್ಷಕೇತರ ಸಿಬ್ಬಂದಿಗಳ ಸೇವೆಯಲ್ಲಿ ಅಂತರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳನ್ನು ಒಂದೇ ಕಾಯ್ದೆಯಡಿ ತರುವುದರಿಂದ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಹಾಗೂ ಶಿಕ್ಷಕ / ಶಿಕ್ಷಕೇತರ ನೇಮಕಾತಿ ಹಾಗೂ ಏಕರೂಪ ಪರೀಕ್ಷೆಯನ್ನು ನಡೆಸುವುದರಿಂದ ಆಡಳಿತ ನಿಯಂತ್ರಣವನ್ನು ಸರಳವಾಗಿ ನಡೆಸಬಹುದಾಗಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ಈ ನಿಯಮವನ್ನು ಯಾವಾಗ ಜಾರಿಗೆ ತರಲಾಗುವುದು ?

## ಸರ್ಕಾರಿ ಶಾಲೆಗಳ ಸಬಲೀಕರಣದ ವರದಿ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೮೩ (೩೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಶಾಲೆಗಳ ಸಬಲೀಕರಣಕ್ಕಾಗಿ ಸರ್ಕಾರ ಮುಂದಾಗಿರುವುದು ನಿಜವೇ ;

(ಆ) ಈ ಶಾಲೆಗಳ ಸಬಲೀಕರಣಕ್ಕಾಗಿ ವರದಿಯುನ್ನು ತಯಾರಿಸಲಾಗಿದೆಯೇ ; ತಯಾರಿಸಿದ್ದಲ್ಲಿ ವಿವರ ನೀಡುವುದು ;

(ಇ) ಈ ವರದಿಯ ಶಿಫಾರಸ್ಸಿನ ಅಂಶಗಳನು ಅನುಷ್ಠಾನಗೊಳಿಸಲು ಸರ್ಕಾರ ಯಾವ ರೀತಿಯ ಯೋಜನೆಯನ್ನು ಹಾಕಿಕೊಳ್ಳಲಾಗಿದೆ ? (ವಿವರ ನೀಡುವುದು)

## ಬೆಂಗಳೂರು ನಗರದಲ್ಲಿರುವ ಆಟೋರಿಕ್ಷಾಗಳ ನೋಂದಣಿ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೮೪ (೩೯೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಒಟ್ಟು ಎಷ್ಟು ಆಟೋರಿಕ್ಷಾಗಳ ನೊಂದಣಿಯಾಗಿವೆ ;

(ಆ) ಇದರಲ್ಲಿ ಪರ್ಮಿಟ್ ಇಲ್ಲದೇ ಓಡಾಡುತ್ತಿರುವ ಆಟೋರಿಕ್ಷಾಗಳ ಸಂಖ್ಯೆ ಎಷ್ಟು;

(ಇ) ಆಧಾರ್ ಸಂಖ್ಯೆಯನ್ನು ಆಧಾರವಾಗಿಟ್ಟುಕೊಂಡು ಆಟೋ ಚಾಲಕರಿಗೆ ಈ ಪರ್ಮಿಟನ್ನು ವಿಸ್ತರಿಸುವ ಯೋಜನೆ ಸರ್ಕಾರದ ಮುಂದೆ ಇದೆಯೇ ;

(ಈ) ಒಂದೇ ಪರ್ಮಿಟ್‌ನಲ್ಲಿ ಎರಡು–ಮೂರು ಆಟೋರಿಕ್ಷಾಗಳು ನಗರದಲ್ಲಿ ಸಂಚರಿಸುತ್ತಿರುವ ಬಗ್ಗೆ ದೂರುಗಳು ಬಂದಿದ್ದರೂ ಸರ್ಕಾರ ಇದನ್ನು ನಿಯಂತ್ರಿಸದಿರಲು ಕಾರಣಗಳೇನು ?

## ರಾಜ್ಯದಲ್ಲಿ ಗಣಿಗಾರಿಕೆ ಉದ್ಯಮಿಗಳಿಂದ ಸಂಗ್ರಹಿಸಿರುತ್ತಿರುವ ಅಭಿವೃದ್ಧಿ ಶುಲ್ಕದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೮೫ (೩೯೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗಣಿಗಾರಿಕೆ ಉದ್ಯಮಿಗಳಿಂದ ಅಭಿವೃದ್ಧಿ ಶುಲ್ಕವನ್ನು ಸಂಗ್ರಹಿಸುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳ ಅವಧಿಯಲ್ಲಿ ವಿವಿಧ ಗಣಿಗಾರಿಕೆ ಉದ್ಯಮಿಗಳಿಂದ ಸಂಗ್ರಹಿಸಿದ ಒಟ್ಟು ಹಣ ಎಷ್ಟು: (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಹಣವನ್ನು ಯಾವ ಯಾವ ಅಭಿವೃದ್ಧಿ ಕಾರ್ಯಗಳಿಗೆ ಬಳಸಲಾಗುತ್ತಿದೆ ಮತ್ತು ಅದಕ್ಕೆ ಇರುವ ಮಾನದಂಡಗಳೇನು ;

(ಈ) ಕಳೆದ ೩ ವರ್ಷಗಳ ಅವಧಿಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಖರ್ಚು ಮಾಡಿದ ಹಣ ವೆಷ್ಟು ಮತ್ತು ಅಭಿವೃದ್ಧಿ ಕಾರ್ಯಗಳಾವುವು ? (ವಿವರ ನೀಡುವುದು)

## ನಿರುದ್ಯೋಗಿ ಯುವಕರಿಗೆ ಯೋಜನೆಗಳ ಅರಿವು ಮೂಡಿಸುವ ಕಾರ್ಯಕ್ರಮದ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೮೬ (೩೩೮) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಿರುದ್ಯೋಗಿ ಯುವಜನರಿಗೆ ಸಣ್ಣ ಕೈಗಾರಿಕೆ ಉದ್ದಿಮೆ ನಡೆಸಲು ಅರಿವು ಮೂಡಿಸುವ ಸರ್ಕಾರದ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಈವರೆಗೆ ನೀಡಿರುವ ಮಂಜೂರಾತಿ ಎಷ್ಟು; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

(ಇ) ಹೊಸದಾಗಿ ಪ್ರಾರಂಭಿಸಲಾದ ಸಣ್ಣ ಕೈಗಾರಿಕಾ ಘಟಕಗಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ನೆರವು ಹಾಗೂ ಯೋಜನೆಗಳ ಬಗ್ಗೆ ವಿವರ ನೀಡುವುದು ?

## ಶಿಥಿಲಗೊಂಡ ಶಾಲಾ ಕೊಠಡಿಗಳ ದುರಸ್ತಿ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೮೭ (೩೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಎಷ್ಟು ಕೊಠಡಿಗಳಲ್ಲಿ ತರಗತಿಗಳು ನಡೆಸಲ್ಪಟ್ಟಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ತರಗತಿಗಳು ನಡೆಯುವ ಎಷ್ಟು ಕೊಠಡಿಗಳು ಶಿಥಿಲಗೊಂಡಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಶಿಥಿಲಗೊಂಡ ಕೊಠಡಿಗಳಲ್ಲಿ ಎಷ್ಟು ದುರಸ್ತಿಯಾಗಿವೆ ಮತ್ತು ದುರಸ್ತಿಗೆ ಬಾಕಿ ಇರುವ ಕೊಠಡಿಗಳ ಸಂಖ್ಯೆ ಎಷ್ಟು; (ಅಂಕಿ ಅಂಶಗಳನ್ನು ನೀಡುವುದು)

(ಈ) ಶಿಥಿಲಾವಸ್ಥೆಯಲ್ಲಿರುವ ಕೊಠಡಿಗಳನ್ನು ದುರಸ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಸ್ಥಾಪನೆ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೮೮ (೩೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ ಸ್ಥಾಪನೆಯ ಉದ್ದೇಶದ ಬಗ್ಗೆ ವಿವರ ನೀಡುವುದು ;

(ಆ) ಈ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಕೋರ್ಸುಗಳ ವಿವರ ಮತ್ತು ಈ ಕೋರ್ಸುಗಳಿಗೆ ಸೇರಲು ಬೇಕಾಗಿರುವ ಅರ್ಹತೆ ಬಗ್ಗೆ ವಿವರ ನೀಡುವುದು ;

(ಇ) ತರಗತಿಗಳು ಪ್ರಾರಂಭವಾಗಿದ್ದಲ್ಲಿ ಎಷ್ಟು ವಿದ್ಯಾರ್ಥಿಗಳು ಸೇರ್ಪಡೆಗೊಂಡಿದ್ದಾರೆ ; (ವಿಷಯವಾರು / ಕೋರ್ಸುವಾರು ವಿವರಣೆ ನೀಡುವುದು)

(ಈ) ಈ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಶಿಕ್ಷಣವನ್ನು ದೂರ–ಶಿಕ್ಷಣ (Distance Learning Correspondence) ಮೂಲಕ ಪಡೆಯಲು ಸಾಧ್ಯವಿದೆಯೇ ? (ವಿವರ ನೀಡುವುದು)

## ಬಂಡವಾಳ ಹೂಡಿಕೆಯಿಂದ ಉದ್ಯೋಗ ಸೃಷ್ಠಿಯಾಗಿರುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೮೯ (೩೩೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಉದ್ದಿಮೆಗಳಲ್ಲಿ ಹೂಡಿಕೆ ಮಾಡಲು ಉದ್ದೇಶಿಸಿರುವ / ಹೂಡಿಕೆಯಾದ ಬಂಡವಾಳದ ಮೊತ್ತವೆಷ್ಟು; (ವರ್ಷಾವಾರು / ಜಿಲ್ಲಾವಾರು ವಿವರ ನೀಡುವುದು)

(ಆ) ಈ ಹೂಡಿಕೆಯಾದ ಬಂಡವಾಳದಿಂದ ರಾಜ್ಯದಲ್ಲಿನ ಎಷ್ಟು ಜನರಿಗೆ ಉದ್ಯೋಗ ಸೃಷ್ಠಿಯಾಗಿದೆ ; (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

(ಇ) ಮುಂಬರುವ ವರ್ಷಗಳಲ್ಲಿ ಉದ್ದಿಮೆಗಳಿಗೆ ಬಂಡವಾಳ ಹೂಡಿಕೆ ಮಾಡಬಯಸುವವರನ್ನು ಆಕರ್ಷಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ನರ್ಮ್ ಯೋಜನೆ ಅಡಿಯಲ್ಲಿ ಅನುದಾನ ನೀಡಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೦ (೩೬೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷದಲ್ಲಿ ಸಾರಿಗೆ ಇಲಾಖೆಯ ವಿವಿಧ ಯೋಜನೆಗಳಿಗೆ ಕೇಂದ್ರ ಸರ್ಕಾರ ಮತ್ತು ವಿಶ್ವ ಬ್ಯಾಂಕ್ ನೀಡಿದ ಅನುದಾನವೆಷ್ಟು ; (ವರ್ಷವಾರು–ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲೆ ಮತ್ತು ನಗರಗಳಲ್ಲಿ ನರ್ಮ್ ಯೋಜನೆ ಜಾರಿಯಲ್ಲಿದೆ ; ಸದರಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಬಸ್ಸುಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೪ ವರ್ಷದಲ್ಲಿ ನರ್ಮ್ ಯೋಜನೆಯಡಿ ಮಂಜೂರಾದ ಅನುದಾನವೆಷ್ಟು; ಇದರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನರ್ಮ್ ಯೋಜನೆ ಯಾವಾಗ ಪ್ರಾರಂಭವಾಯಿತು ; ಒಟ್ಟು ನರ್ಮ್ ಯೋಜನೆಯಡಿ ಮಂಜೂರಾದ ಬಸ್ಸುಗಳ ಸಂಖ್ಯೆ ಎಷ್ಟು ; ಮಂಜೂರಾದ ಅನುದಾನ ಎಷ್ಟು ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಿದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೧ (೩೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಶಾಲೆಗಳ ಮೂಲ ಸೌಕರ್ಯಕ್ಕಾಗಿ ಸರ್ಕಾರ ವೆಚ್ಚ ಮಾಡಿದ ಅನುದಾನವೆಷ್ಟು ;

(ಆ) ರಾಜ್ಯದಲ್ಲಿರುವ ಒಟ್ಟು ಕಿರಿಯ, ಹಿರಿಯ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಎಷ್ಟು ಶಾಲೆಗಳಲ್ಲಿ ಶಾಲಾ ವಿದ್ಯಾರ್ಥಿಗಳಿಗೆ

ಶೌಚಾಲಯದ ವ್ಯವಸ್ಥೆಯಿದೆ ; ಎಷ್ಟು ಶಾಲೆಗಳಲ್ಲಿ ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯಗಳಿವೆ ; ಎಷ್ಟು ಶಾಲೆಗಳಲ್ಲಿ ಬಾವಿ / ಬೋರ್‌ವೆಲ್ ಅಥವಾ ನಲ್ಲಿ ನೀರಿನ ವ್ಯವಸ್ಥೆಯಿದೆ ; (ತಾಲ್ಲೂಕುವಾರು ಜಿಲ್ಲಾವಾರು ವಿವರದೊಂದಿಗೆ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಪಂಚಾಯತ್‌ವಾರು ವಿವರ ನೀಡುವುದು ಹಾಗೂ ಸರ್ಕಾರಿ ಮತ್ತು ಖಾಸಗಿ ಶಾಲೆಯ ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಒಟ್ಟು ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ ; ಇನ್ನೂ ಎಷ್ಟು ಶಾಲೆಗಳನ್ನು ಮುಚ್ಚುವ ಪ್ರಸ್ತಾವನೆ ಸರ್ಕಾರದ ಮುಂದಿದೆ ; (ವಿವರ ನೀಡುವುದು)

(ಈ) ಪಂಚಾಯತ್‌ಗೊಂದು ಮಾದರಿ ಶಾಲೆ ಪ್ರಾರಂಭಿಸಲಾಗಿದೆಯೇ ; ಸರ್ಕಾರದ ಈ ಯೋಜನೆ ಯಾವ ಹಂತದಲ್ಲಿದೆ ; ಈ ಯೋಜನೆ ವಿಳಂಬಕ್ಕೆ ಕಾರಣಗಳೇನು ; ಈ ಯೋಜನೆಯನ್ನು ಯಾವಾಗ ಕಾರ್ಯಗತಗೊಳಿಸಲಾಗುವುದು ;

(ಉ) ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿ ಸಂಖ್ಯೆಗನುಗುಣವಾಗಿ ಶಿಕ್ಷಕರು, ಕೊಠಡಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಉತ್ತಮ ಮೂಲ ಸೌಕರ್ಯ ಒದಗಿಸುವುದರೊಂದಿಗೆ ಸರ್ಕಾರಿ ಶಾಲೆಗೆ ಹೆಚ್ಚೆಚ್ಚು ಮಕ್ಕಳು ದಾಖಲಾಗುವ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಪಂಚಾಯತ್‌ರಾಜ್ ಅಭಿವೃದ್ಧಿ ಅಧಿಕಾರಿಗಳ ಬಡ್ತಿ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೨ (೩೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದಿಂದ ಮುಂದಿನ ಹುದ್ದೆಗೆ ಬಡ್ತಿ ನೀಡುವಾಗ ಯಾವ ಯಾವ ಮಾನದಂಡವನ್ನು ಪರಿಗಣಿಸಲಾಗುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿ ಪ್ರಕಟಪಡಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂಕದಂದು ಪ್ರಕಟಿಸಲಾಗಿದೆ ; ಮತ್ತು ಪಟ್ಟಿ ನೀಡುವುದು ;

(ಇ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿ ಕೆ.ಸಿ.ಎಸ್.ಆರ್ ನಿಯಮದಂತೆ ಪ್ರಕಟಗೊಂಡಿದೆಯೇ ; ಹಾಗಿದ್ದಲ್ಲಿ, ಯಾವ ಪ್ರಕರಣದಡಿ ಪಟ್ಟಿ ತಯಾರಿಸಲಾಗಿದೆ ;

(ಈ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಇಲಾಖೆಯಲ್ಲಿ ಗ್ರಾಮ ಪಂಚಾಯತ್ ನೌಕರರಿಗೆ ಎಷ್ಟು ಬಾರಿ ಪದೋನ್ನತಿ ನೀಡಬಹುದು ;

(ಉ) ಗ್ರಾಮ ಪಂಚಾಯತ್‌ನಲ್ಲಿ ಕರ ವಸೂಲಿಗಾರ, ಗುಮಾಸ್ತರಾಗಿ ಮತ್ತು ಪಂಪು ಚಾಲಕರಾಗಿ ಕೆಲಸ ನಿರ್ವಹಿಸಿ ನಂತರ ಪದೋನ್ನತಿ ಪಡೆದು ತಾಲ್ಲೂಕು ಸಹಾಯಕ ನಿರ್ದೇಶಕರು ಮತ್ತು ಕಾರ್ಯನಿರ್ವಾಹಣಾಧಿಕಾರಿ, ಸಹಾಯಕ ಯೋಜನಾಧಿಕಾರಿ ಮತ್ತು ಸಹಾಯಕ ಉಪ ಕಾರ್ಯದರ್ಶಿ ಹುದ್ದೆ ಪಡೆದ ನೌಕರರ ಹೆಸರು ಮತ್ತು ಸಂಖ್ಯೆ ಎಷ್ಟು ? (ಜಿಲ್ಲಾವಾರು ಮೂಲ ಹುದ್ದೆ–ಪ್ರಸಕ್ತ ಹುದ್ದೆವಾರು ಹೆಸರು ಮತ್ತು ವಿದ್ಯಾರ್ಹತೆಯೊಂದಿಗೆ, ಇಲಾಖೆ ಪರೀಕ್ಷೆ ಪಾಸಾದ ಸಂಪೂರ್ಣ ವಿವರ ನೀಡುವುದು ಮತ್ತು ಪದೋನ್ನತಿ ಪಡೆದು ನಿವೃತ್ತಿಯಾದವರ ವಿವರವನ್ನು ನೀಡುವುದು)

## ಗ್ರಾಮ ಪಂಚಾಯತಿಗಳಲ್ಲಿ ಬಾಕಿ ತೆರಿಗೆ ವಸೂಲಿ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೩ (೩೬೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಗ್ರಾಮ ಪಂಚಾಯತ್‌ಗಳಲ್ಲಿ ಸಾವಿರಾರು ಕೋಟಿ ತೆರಿಗೆ ವಸೂಲಿ ಬಾಕಿ ಇರುವುದು ನಿಜವೇ ; ಕಳೆದ ೫ ವರ್ಷದ ಒಟ್ಟಾರೆ ಬೇಡಿಕೆ ಮತ್ತು ಬಾಕಿಯ ಒಟ್ಟು ಮೊತ್ತವೆಷ್ಟು; ಪ್ರಸಕ್ತ ಸಾಲಿನ ವಸೂಲಾತಿ ಎಷ್ಟು ;

(ಆ) ಗ್ರಾಮ ಪಂಚಾಯತ್‌ಗಳಲ್ಲಿ ತೆರಿಗೆ ನಿರ್ಧರಣೆಯಲ್ಲಿ ಪಕ್ಷಪಾತ, ಮತ್ತು ಅವೈಜ್ಞಾನಿಕ ಮಾನದಂಡಗಳಿಂದ ಕೋಟ್ಯಾಂತರ ತೆರಿಗೆ ಖೋತಾವಾಗುತ್ತಿದ್ದು, ಸಂಪನ್ಮೂಲ ಕ್ರೋಢೀಕರಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದ ಯಾವ ಯಾವ ಗ್ರಾಮ ಪಂಚಾಯತ್‌ಗಳು, ತಮ್ಮ ವ್ಯಾಪ್ತಿಯಲ್ಲಿ ಬರುವ ಮೊಬೈಲ್ ಟವರ್, ವಿಂಡ್, ಮಿಲ್, ಓ.ಎಫ್.ಸಿ. ಕೇಬಲ್ ಖಾಸಗಿ ವಿದ್ಯಾಸಂಸ್ಥೆಗಳು, ವಿಮಾನ ನಿಲ್ದಾಣ, ಎಸ್.ಇ. ಝಡ್‌ಗಳಿಗೆ ತೆರಿಗೆ ವಿಧಿಸುತ್ತಿದೆ ; ಅವಕಾಶವಿದ್ದು, ತೆರಿಗೆ ವಿಧಿಸದಿರುವ ಪಂಚಾಯತ್‌ಗಳ ಸಂಖ್ಯೆ ಎಷ್ಟು; ತೆರಿಗೆ ವಿಧಿಸದಿರಲು ಕಾರಣಗಳೇನು ;

(ಈ) ಮರಳುಗಾರಿಕೆಯಿಂದ ವಸೂಲಾಗುವ ರಾಜಧನದ ಶೇಕಡಾ ೨೫ರಷ್ಟನ್ನು ಕಳೆದ ೫–೬ ವರ್ಷಗಳಿಂದ ಗ್ರಾಮ ಪಂಚಾಯತ್‌ಗಳಿಗೆ ಲೋಕೋಪಯೋಗಿ ಮತ್ತು ಗಣಿ ಇಲಾಖೆಗಳು ಬಿಡುಗಡೆ ಮಾಡದೆ ಉಳಿಸಿಕೊಂಡಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ಪ್ರತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಎಲ್ಲಾ ರೀತಿಯ ಆಸ್ತಿಗಳಿಗೆ ತೆರಿಗೆಗಳನ್ನು ವಿಧಿಸಿ, ವಸೂಲಿ ಮಾಡಲು ಸಮಗ್ರ ಸಮೀಕ್ಷೆ (Total Station Survey) ನಡೆಸಲು ಹಾಗೂ ಸಾವಿರಾರು ಕೋಟಿ ಬಾಕಿ ಇರುವ ತೆರಿಗೆಯನ್ನು ವಸೂಲಿ ಮಾಡಲು ಸರ್ಕಾರದಿಂದ ಕೈಗೊಳ್ಳಲಾಗಿರುವ ಕ್ರಮಗಳೇನು ?

## ವೊಲ್ವೋ ಬಸ್ಸುಗಳ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೪ (೩೨೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ವೊಲ್ವೋ ಬಸ್ಸುಗಳ ಕೊರತೆಯಿಂದ ದೂರ ಪ್ರಯಾಣ ಬೆಳೆಸುವ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಡಿ ಬರುವ ಘಟಕಗಳು ಎಷ್ಟು; (ವಿವರ ನೀಡುವುದು)

(ಇ) ಯಾವ ಯಾವ ಘಟಕಗಳಲ್ಲಿ ವೊಲ್ವೋ ಬಸ್‌ಗಳನ್ನು ಒದಗಿಸಲಾಗಿದೆ ;

(ಈ) ವೊಲ್ವೋ ಬಸ್‌ಗಳ ನಿರ್ವಹಣೆ ಹಾಗೂ ವಾರ್ಷಿಕ ನಿರ್ವಹಣೆಯನ್ನು ಮಾಡುತ್ತಿರುವವರು ಯಾರು ; ನಿರ್ವಹಣೆ ಮಾಡಲು ಅನುಸರಿಸುವ ಮಾನದಂಡಗಳೇನು ; ಸದರಿ ಬಸ್‌ಗಳನ್ನು ನಿರ್ವಹಣೆ ಮಾಡುತ್ತಿದ್ದಲ್ಲಿ, ಏಕೆ ದುರಸ್ಥಿ ಕಾರ್ಯವನ್ನು ಏಕೆ ಕೈಗೊಂಡಿರುವುದಿಲ್ಲ ; (ವಿವರ ನೀಡುವುದು)

(ಉ) ವೊಲ್ವೋ ಬಸ್ ಸೌಲಭ್ಯ ಇಲ್ಲದೇ ಇರುವ ಘಟಕಗಳಿಗೆ ಯಾವ ಕಾಲಮಿತಿಯಲ್ಲಿ ಈ ಸೌಲಭ್ಯ ಒದಗಿಸಲಾಗುವುದು ?

## ರಾಜ್ಯದಲ್ಲಿ ಮರಳಿನ ಅಭಾವ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೫ (೩೨೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮರಳಿನ ಅಭಾವವನ್ನು ಮನಗಂಡು ಸರ್ಕಾರವು ಮಲೇಷ್ಯಾದಿಂದ ಮರಳನ್ನು ಖರೀದಿಸಿ ಸಾರ್ವಜನಿಕರಿಗೆ ವಿತರಿಸುತ್ತಿರುವುದು ನಿಜವೇ;

(ಆ) ಆದರೆ ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಮರಳನ್ನು ಪೂರೈಸಲು ಸರ್ಕಾರವು ಕೈಗೊಂಡ ಕ್ರಮಗಳೇನು;

(ಇ) ಪ್ರಸ್ತುತ ಸಾರ್ವಜನಿಕರಿಂದ ಬಂದಿರುವ ಮರಳಿನ ಬೇಡಿಕೆ ಎಷ್ಟು; ಸದ್ಯ ಸರ್ಕಾರವು ಮಲೇಷ್ಯಾದಿಂದ ಎಷ್ಟು ಟನ್ ಮರಳನ್ನು ಆಮದು ಮಾಡಿಕೊಂಡಿದೆ;

(ಈ) ಮರಳನ್ನು ಆಮದು ಮಾಡಿಕೊಂಡ ಪ್ರತಿ ಟನ್ನಿನ ಬೆಲೆ ಎಷ್ಟು; ಸಾರ್ವಜನಿಕರಿಗೆ ಯಾವ ದರದಲ್ಲಿ ವಿತರಿಸಲಾಗುತ್ತಿದೆ; (ವಿವರ ನೀಡುವುದು)

(ಉ) ಸಾರ್ವಜನಿಕರಿಗೆ ಮರಳನ್ನು ವಿತರಿಸಲು ಸರ್ಕಾರವು ಅನುಸರಿಸುವ ನಿಯಮಗಳೇನು; ಮರಳನ್ನು ವಿತರಿಸಲು ಮತ್ತು ಪಡೆಯಲು ಇರುವ ಅರ್ಹತೆಗಳು ಯಾವುವು; ಹಾಗೂ ಇದಕ್ಕಿರುವ ಮಾನದಂಡಗಳೇನು?

# ಸ್ಥಳೀಯ ಸಂಸ್ಥೆಗಳಿಗೆ ಅಧಿಕಾರ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೬ (೩೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಪಂಚಾಯತ್ ರಾಜ್ ತಿದ್ದುಪಡಿ ಕಾಯಿದೆಯಲ್ಲಿರುವಂತೆ ಸ್ಥಳೀಯ ಸಂಸ್ಥೆಗಳಿಗೆ ಪೂರ್ಣ ಪ್ರಮಾಣದಲ್ಲಿ ಅಧಿಕಾರ ನೀಡುವ ಕಾಯ್ದೆಗಳ ಜಾರಿಯ ವಿಳಂಬಕ್ಕೆ ಕಾರಣಗಳೇನು;

(ಆ) ತಿದ್ದುಪಡಿ ಕಾಯಿದೆಯಂತೆ ಸರ್ಕಾರದ ವಿವಿಧ ಯೋಜನೆಗಳ ಫಲಾನುಭವಿಗಳ ಆಯ್ಕೆಯ ಅಧಿಕಾರ ಗ್ರಾಮ ಸಭೆಗಳಿಗಿದ್ದರೂ, ವಸತಿ, ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಗಂಗಾಕಲ್ಯಾಣ ಸೇರಿದಂತೆ ವಿವಿಧ ಯೋಜನೆಗಳ ಫಲಾನುಭವಿಗಳ ಆಯ್ಕೆ ಶಾಸಕರ ಮೂಲಕವೇ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು;

(ಇ) ಗ್ರಾಮ ಪಂಚಾಯತಿಗಳು ಸ್ವಂತ ಸರ್ಕಾರದಂತೆ ಕೆಲಸ ನಿರ್ವಹಿಸಲು ಇಲಾಖೆಗಳನ್ನು ಗ್ರಾಮ ಪಂಚಾಯತಿ ಅಧೀನದಲ್ಲಿ ತರುವುದು, ಅನುದಾನ ಹೆಚ್ಚಳ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವುದು ಮತ್ತು ಹೆಚ್ಚುವರಿ ಸಿಬ್ಬಂದಿ ನೀಡುವುದರ ಕುರಿತು ಸರ್ಕಾರದ ನಿಲುವೇನು; ಈ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಕುಲಪತಿಗಳ ಹುದ್ದೆಗಳು ಖಾಲಿ ಇರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೭ (೩೨೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವ ವಿದ್ಯಾಲಯಗಳಿಗೆ ಕುಲಪತಿಗಳೇ ಇಲ್ಲದಿರುವುದರಿಂದ ಶೈಕ್ಷಣಿಕ ಚಟುವಟಿಕೆಗಳು ಕುಂಠಿತವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಕುಲಪತಿಗಳ ಹುದ್ದೆ ಖಾಲಿ ಇವೆ;

(ಇ) ಕುಲಪತಿಗಳನ್ನು ನೇಮಿಸಲು ಸರ್ಕಾರವು ವಿಳಂಬ ಧೋರಣೆ ಅನುಸರಿಸುತ್ತಿರಲು ಕಾರಣಗಳೇನು;

(ಈ) ವಿಶ್ವ ವಿದ್ಯಾಲಯುಗಳಿಗೆ ಕುಲಪತಿಗಳನ್ನು ನೇಮಿಸಲು ಅನುಸರಿಸುವ ಮಾನದಂಡಗಳೇನು ಹಾಗೂ ಅರ್ಹತೆಗಳ ವಿವರ ಒದಗಿಸುವುದು;

(ಉ) ಯಾವ ಕಾಲಮಿತಿಯುಲ್ಲಿ ಕುಲಪತಿಗಳ ನೇಮುಕಾತಿ ಮಾಡಲಾಗುವುದು?

## ರಾಜ್ಯದ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಸದಸ್ಯರುಗಳ, ಅಧ್ಯಕ್ಷರುಗಳ ಹಾಗೂ ಉಪಾಧ್ಯಕ್ಷರುಗಳ ಗೌರವಧನ ಹೆಚ್ಚಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೮ (೪೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇರಳ ರಾಜ್ಯದಲ್ಲಿ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಅಧ್ಯಕ್ಷರಿಗೆ, ಉಪಾಧ್ಯಕ್ಷರಿಗೆ ಹಾಗೂ ಸದಸ್ಯರಿಗೆ ನೀಡುತ್ತಿರುವ ಗೌರವಧನದ ಕುರಿತು ಮಾಹಿತಿ ಇದೆಯೇ;

(ಆ) ಹಾಗಿದ್ದಲ್ಲಿ, ಕೇರಳ ರಾಜ್ಯದಲ್ಲಿ ಈಗಾಗಲೇ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಅಧ್ಯಕ್ಷರಿಗೆ, ಉಪಾಧ್ಯಕ್ಷರಿಗೆ ಹಾಗೂ ಸದಸ್ಯರಿಗೆ ನೀಡಲಾಗುತ್ತಿರುವ ಗೌರವಧನವೆಷ್ಟು;

(ಇ) ಕೇರಳ ರಾಜ್ಯ ಸರ್ಕಾರ ನೀಡುತ್ತಿರುವ ಗೌರವಧನಕ್ಕೂ ನಮ್ಮ ರಾಜ್ಯ ಸರ್ಕಾರ ನೀಡುತ್ತಿರುವ ಗೌರವಧನಕ್ಕೂ ಇರುವ ವ್ಯತ್ಯಾಸವೆಷ್ಟು;

(ಈ) ನಮ್ಮ ರಾಜ್ಯದಲ್ಲಿ ಕೂಡ ಕೇರಳ ರಾಜ್ಯದಲ್ಲಿ ನೀಡುತ್ತಿರುವ ಮಾದರಿಯಲ್ಲಿ ಗೌರವಧನ ನೀಡುವ ವಿಚಾರ ಸರ್ಕಾರದ ಮುಂದೆ ಇದೆಯೇ?

## ಪಂಚಾಯತ್ ರಾಜ್ ಸಂಸ್ಥೆಗಳನ್ನು ಬಲಪಡಿಸಲು ಕೈಗೊಂಡಿರುವ ಕ್ರಮಗಳು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯ (೪೨೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೩ರ ಪಂಚಾಯತ್ ರಾಜ್ ಕಾಯಿದೆಗೆ ಕರ್ನಾಟಕ ಪಂಚಾಯತ್ ರಾಜ್ ಆ್ಯಕ್ಟ್ ತಿದ್ದುಪಡಿಯ ಪ್ರಕಾರ (೨ನೇ ತಿದ್ದುಪಡಿ ಕಾಯಿದೆ ೨೦೫೦) ಪಂಚಾಯತ್ ರಾಜ್ ಸಂಸ್ಥೆಗಳನ್ನು ಬಲಪಡಿಸಲು ಕೈಗೊಂಡಿರುವ ಕ್ರಮಗಳೇನು;

(ಆ) ಎಷ್ಟು ಗ್ರಾಮಪಂಚಾಯತ್‌ಗಳಲ್ಲಿ ಸ್ಥಾಯಿ ಸಮಿತಿಗಳನ್ನು ರಚಿಸಲಾಗಿದೆ; ವಸತಿಗಳನ್ನು ಗುರುತಿಸಲಾಗಿದೆ; ತಾಲ್ಲೂಕು ಅಭಿವೃದ್ಧಿ ಮತ್ತು ಯೋಜನಾ ಸಮಿತಿಗಳನ್ನು ರಚಿಸಲಾಗಿದೆಯೇ; ರಚನೆಯಾಗದಿದ್ದಲ್ಲಿ, ರಚಿಸಲಾಗದಿರುವುದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಇ) ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ವಸತಿ ಸಭೆಗಳನ್ನು ನಡೆಸಲಾಗಿದೆ; ತಿದ್ದುಪಡಿ ಕಾಯಿದೆ ೩೦೯ ಹೆಚ್. ಪ್ರಕಾರ ೬ ತಿಂಗಳಿಗೊಮ್ಮೆ ಯೋಜನೆಗಳ ಪ್ರಗತಿಯು ಬಗ್ಗೆ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್‌ಗಳಿಂದ ಸಿದ್ಧಪಡಿಸಲಾದ ಕ್ರಿಯಾ ಯೋಜನಾ ವರದಿಯ ಬಗ್ಗೆ ಮಾಹಿತಿ ನೀಡುವುದು?

## ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೦ (೩೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಗೆ ಮಂಜೂರಾದ ಶುದ್ಧ ಕುಡಿಯುವ ನೀರಿನ ಘಟಕದ ಸಂಖ್ಯೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಘಟಕಗಳಲ್ಲಿ ಸಾರ್ವಜನಿಕರಿಗೆ ನಿರಂತರ ಸೇವೆ ಒದಗಿಸುತ್ತಿರುವ ಘಟಕಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಾರ್ಯ ನಿರ್ವಹಿಸದೆ ಇರುವ ಘಟಕಗಳ ಸಂಖ್ಯೆ ಎಷ್ಟು; ಇದರ ದುರಸ್ಥಿ ಕಾರ್ಯದ ಜವಾಬ್ದಾರಿ ಯಾರ ಮೇಲಿದೆ; ಇದನ್ನು ಎಷ್ಟು ಅವಧಿಯೊಳಗೆ ದುರಸ್ಥಿಗೊಳಿಸಲಾಗುವುದು; (ವಿವರ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ಈ ಘಟಕ ಯೋಜನೆಗೆ ಮಂಜೂರಾದ ಮೊತ್ತವೆಷ್ಟು; ಇದರಲ್ಲಿ ವಿನಿಯೋಗವಾದ ಮೊತ್ತ ಎಷ್ಟು; ಉಳಿಕೆಯಾಗಿರುವ ಮೊತ್ತ ವೆಷ್ಟು? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಡಿಯಲ್ಲಿ ಬರುವ ರಸ್ತೆಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೧ (೩೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಡಿಯಲ್ಲಿ ಬರುವ ರಸ್ತೆಗಳು ಯಾವುವು; (ಪೂರ್ಣ ವಿವರ ನೀಡುವುದು)

(ಆ) ಈ ರಸ್ತೆಗಳನ್ನು ಅಭಿವೃದ್ಧಿಪಡಿಸಲು ತೆಗೆದುಕೊಂಡ ಕ್ರಮಗಳೇನು;

(ಇ) ೨೦೧೬–೧೭ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು;

(ಈ) ೨೦೧೭ನೇ ಸಾಲಿನಲ್ಲಿ ಈ ರಸ್ತೆಗಳಿಗೆ ಹೆಚ್ಚಿನ ಹಣ ಬಿಡುಗಡೆ ಮಾಡುವ ಬಗ್ಗೆ ಸರ್ಕಾರದ ನಿಲುವೇನು?

## ಗ್ರಾಮ ಠಾಣಾ ವ್ಯಾಪ್ತಿ ಪುನರ್ ನಿಗಧಿ ಪಡಿಸುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೨ (೩೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಠಾಣಾ ವ್ಯಾಪ್ತಿಯನ್ನು ಮೀರಿ ಗ್ರಾಮಗಳು ಬೆಳೆದಿರುವುದು (ವಿಸ್ತಾರ ಹೊಂದಿರುವುದು) ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಗ್ರಾಮ ಠಾಣಾ ವ್ಯಾಪ್ತಿಯನ್ನು ಈ ಹಿಂದೆ ಯಾವಾಗ ನಿಗಧಿಪಡಿಸಲಾಗಿತ್ತು; ಅಂದಿನ ರಾಜ್ಯದ ಜನ ಸಂಖ್ಯೆ ಎಷ್ಟು;

(ಇ) ಗ್ರಾಮ ಠಾಣಾ ವ್ಯಾಪ್ತಿಯನ್ನು ವಿಸ್ತರಿಸದೆ ಇರುವುದರಿಂದ ಗ್ರಾಮೀಣ ಪ್ರದೇಶದ ಜನತೆಗೆ ಮನೆ ನಿರ್ಮಿಸಿಕೊಳ್ಳಲು ಹಲವು ರೀತಿಯ ಸಮಸ್ಯೆಗಳುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಗ್ರಾಮ ಠಾಣಾ ವ್ಯಾಪ್ತಿಯನ್ನು ಪುನರ್ ನಿಗಧಿಪಡಿಸಲು ಸರ್ಕಾರ ತೀರ್ಮಾನಿಸಿದೆಯೇ;

(ಉ) ತೀರ್ಮಾನಿಸಿದ್ದಲ್ಲಿ, ಪುನರ್ ನಿಗಧಿಪಡಿಸಲು ಗೊತ್ತುಪಡಿಸಲಾದ ಕಾಲಮಿತಿ ಎಷ್ಟು?

## ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ ಅನುಷ್ಠಾನ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೩ (೪೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗೆ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು; (ವರ್ಷಾವಾರು, ಕಾಮಗಾರಿವಾರು, ಸಂಪೂರ್ಣ ಮಾಹಿತಿ ನೀಡುವುದು)

(ಇ) ಪ್ರಸ್ತುತ ಈ ಯೋಜನೆಯಡಿಯಲ್ಲಿ ಎಷ್ಟು ಕೂಲಿ ಕಾರ್ಮಿಕರಿಗೆ ಉದ್ಯೋಗ ನೀಡಲಾಗಿದೆ;

(ಈ) ಈ ಯೋಜನೆಯಿಂದ ನೀಡಲಾಗುತ್ತಿರುವ ಒಟ್ಟು ಕೂಲಿಯ ದಿನಗಳು, ಕೂಲಿಯ ಮೊತ್ತ ಹಾಗೂ ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು; (ಪೂರ್ಣ ವಿವರ ನೀಡುವುದು)

(ಉ) ಪ್ರಸ್ತುತ ಯೋಜನೆಯಡಿಯಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ಕೂಲಿ ಕಾರ್ಮಿಕರಿಗೆ ಅನುಕೂಲವಾಗಿದೆ? (ವಿವರ ನೀಡುವುದು)

## ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಜಾಗದಲ್ಲಿ ವಾಣಿಜ್ಯ ಕಟ್ಟಡಗಳನ್ನು ನಿರ್ಮಿಸುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೪ (೩೫೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕಾರ್ಖಾನೆ ಸ್ಥಾಪಿಸಲು ನೀಡುವ ಜಾಗದಲ್ಲಿ ವಸತಿ ಯೋಜನೆಗಳನ್ನು ಮಾಡಬಹುದೆ;

(ಆ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ M/s ಸಾಯಿ ಲಕ್ಷ್ಮೀ ಇಂಡಸ್ಟ್ರೀಸ್ ಪ್ರೈ.ಲಿಮಿಟೆಡ್, ಕನ್ನಮಂಗಲ, ವೈಟ್‌ಫೀಲ್ಡ್ ರೋಡ್, ಬೆಂಗಳೂರು, ಇವರಿಗೆ ನೀಡಿರುವ ಸುಮಾರು ೩೨ ಎಕರೆ ೧೨ ಗುಂಟೆ ಜಾಗದಲ್ಲಿ ಬೃಹತ್ ವಸತಿ ಮತ್ತು ವಾಣಿಜ್ಯ ಮಳಿಗೆಗಳನ್ನು ಕಟ್ಟುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು;

(ಈ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಜಾಗದಲ್ಲಿ ವಸತಿ ಮತ್ತು ವಾಣಿಜ್ಯ ಕಟ್ಟಡಗಳನ್ನು ಕಟ್ಟಲು ಅನುಮತಿ ಇದ್ದರೆ, ರಾಜ್ಯದ ಬೇರೆ ಬೇರೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಜಾಗದಲ್ಲಿ ಕಟ್ಟಡಗಳನ್ನು ನಿರ್ಮಿಸಬಹುದೇ?

## ಸ್ವಚ್ಛ ಭಾರತ ಯೋಜನೆಯಡಿಯಲ್ಲಿ ಮನೆಗೊಂದು ಶೌಚಾಲಯದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೫ (೩೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ವಚ್ಛ ಭಾರತ ಯೋಜನೆಯಡಿಯಲ್ಲಿ ಮನೆಗೊಂದು ಶೌಚಾಲಯವನ್ನು ಸರ್ಕಾರ ನಿರ್ಮಿಸುತ್ತಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ೨೦೦೮-೨೦೧೯ ರಿಂದ ಇದುವರೆವಿಗೆ ನಿರ್ಮಿಸಿರುವ ಒಟ್ಟು ಶೌಚಾಲಯಗಳ ಸಂಖ್ಯೆ ಎಷ್ಟು; (ವರ್ಷಾವಾರು ವಿವರವನ್ನು ನೀಡುವುದು)

(ಇ) ಈ ಯೋಜನೆಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ನೀಡಿರುವ ಅನುದಾನವೆಷ್ಟು? (೨೦೦೮-೦೯ ರಿಂದ ಇದುವರೆವಿಗೆ ವರ್ಷಾವಾರು ವಿವರ ನೀಡುವುದು)

## ಉಚಿತ ಬೈಸಿಕಲ್ ವಿತರಣೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೬ (೩೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗೆ ಸರ್ಕಾರದಿಂದ "ಉಚಿತ ಬೈಸಿಕಲ್" ವಿತರಣೆ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ೨೦೦೮-೦೯ ರಿಂದ ೨೦೧೭-೧೮ನೇ ಸಾಲಿನವರೆಗೆ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗೆ ಸರ್ಕಾರದಿಂದ ವಿತರಣೆ ಮಾಡಿದ ಬೈಸಿಕಲ್‌ಗಳ ಸಂಖ್ಯೆ ಎಷ್ಟು; ಈ ಯೋಜನೆಗೆ ಮೀಸಲಿಟ್ಟ ಹಣ, ಖರ್ಚು ಮಾಡಿದ ಹಣ ಹಾಗೂ ಬಾಕಿ ಹಣ ಎಷ್ಟು; ಪ್ರತಿ ಬೈಸಿಕಲ್‌ಗೆ ತಗಲುವ ವೆಚ್ಚ ಎಷ್ಟು; (ವರ್ಷಾವಾರು, ವಿತರಣೆ ಮಾಡಿದ ಬೈಸಿಕಲ್‌ಗಳ ಸಂಖ್ಯೆ ಸಹಿತ ವಿವರ ನೀಡುವುದು)

(ಇ) ಬೈಸಿಕಲ್ ಗುಣಮಟ್ಟ ಕಾಪಾಡುವ ದೃಷ್ಟಿಯಿಂದ ಬೈಸಿಕಲ್ ವಿತರಣೆಯ ಕಂಪನಿಗೆ ಯಾವ ಮಾನದಂಡವನ್ನು ನಿಗಧಿಪಡಿಸಲಾಗಿದೆ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೭ (೩೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸುವರ್ಣ ಗ್ರಾಮೋದಯ, ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಯೋಜನೆ, ಕೆರೆಗಳ ಪುನರುಜ್ಜೀವನ, ನಬಾರ್ಡ್ ರಸ್ತೆಗಳು ಮತ್ತು ಸೇತುವೆಗಳು , ಸೌರ ಬೆಳಕು, ನಮ್ಮ ಗ್ರಾಮ ನಮ್ಮ ಯೋಜನೆ, ಮುಖ್ಯಮಂತ್ರಿಗಳ ಗ್ರಾಮ ವಿಕಾಸ ಯೋಜನೆ ಮತ್ತು ಮಹಾತ್ಮ ಗಾಂಧಿ ನರೇಗಾ ಯೋಜನೆ ಹಾಗೂ ಅನಿಲ ಯೋಜನೆ ಜಾರಿಯಲ್ಲಿರುವುದು ನಿಜವೇ;

(ಆ) ಹಾಗಿದ್ದರೆ, ೨೦೦೮–೦೯ ರಿಂದ ೨೦೧೭–೧೮ನೇ ಸಾಲಿನವರೆಗೆ ಈ ಯೋಜನೆಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಮೀಸಲಿಟ್ಟ ಹಣ, ಬಿಡುಗಡೆ ಮಾಡಿದ ಹಣ ಹಾಗೂ ಖರ್ಚು ಮಾಡಿದ ಹಣ ಎಷ್ಟು; (ವರ್ಷಾವಾರು ಯೋಜನಾವಾರು ಮತ್ತು ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಇ) ಕಳೆದ ೪ ವರ್ಷಗಳಿಂದ ಅತಿಯಾದ ಬೇಸಿಗೆ ಹಾಗೂ ಬರಗಾಲದ (ಅನಾವೃಷ್ಟಿ) ಸಮಯದಲ್ಲಿ ಕೆರೆಗಳ ಹೂಳೆತ್ತುವ ಕಾಮಗಾರಿ ನಡೆದಿದೆಯೇ; ಕೆರೆಗಳ ಹೂಳೆತ್ತುವ ಯೋಜನೆಗೆ ಸರ್ಕಾರ ಮೀಸಲಿಟ್ಟ ಹಣ ಹಾಗೂ ಖರ್ಚು ಮಾಡಿದ ಹಣ ಎಷ್ಟು? (ವಿವರವನ್ನು ವರ್ಷಾವಾರು, ಜಿಲ್ಲಾವಾರು ಸಹಿತ ನೀಡುವುದು)

## ಸರ್ಕಾರ ಗಣಿಗಾರಿಕೆಗೆ ಪರವಾನಗಿ ನೀಡುತ್ತಿರುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೮ (೪೦೦) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಗಣಿಗಾರಿಕೆಗೆ ಪರವಾನಗಿ ನೀಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ೨೦೧೩–೧೪ ರಿಂದ ಇದುವರೆವಿಗೆ ಎಷ್ಟು ಗಣಿಗಾರಿಕೆಗೆ ಪರವಾನಗಿ ನೀಡಲಾಗಿದೆ; ಪರವಾನಗಿ ಪಡೆದವರ ವಿವರ ಹಾಗೂ ಮಂಜೂರು ಮಾಡಿರುವ ವಿಸ್ತೀರ್ಣಗಳ ಪೂರ್ಣ ಏಕ ವ್ಯಕ್ತಿ (Individual) ವಿವರಗಳನ್ನು ನೀಡುವುದು;

(ಇ) ಗಣಿಗಾರಿಕೆಗೆ ಪರವಾನಗಿಯನ್ನು ಯಾವ ಮಾನದಂಡದಲ್ಲಿ ನೀಡಲಾಗಿದೆ?

## ರಾಜ್ಯದಲ್ಲಿನ ಬಂಡವಾಳ ಹೂಡಿಕೆದಾರರ ಸಮಾವೇಶಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೯ (೩೩೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಂಡವಾಳ ಹೂಡಿಕೆದಾರರ ಸಮಾವೇಶಗಳು ನಡೆದಿರುವುದು ನಿಜವೇ;

(ಆ) ಹಾಗಿದ್ದರೆ, ೨೦೦೮–೦೯ ರಿಂದ ೨೦೧೭–೧೮ನೇ ಸಾಲಿನವರೆಗೆ ರಾಜ್ಯದಲ್ಲಿ ನಡೆದಿರುವ ಬಂಡವಾಳ ಹೂಡಿಕೆದಾರರ ಸಮಾವೇಶಗಳಲ್ಲಿ ಆದಂತಹ ಒಪ್ಪಂದಗಳು ಯಾವುವು; ಇಲ್ಲಿಯವರೆಗೆ ಒಪ್ಪಂದ ಆದ ಕಂಪನಿಗಳಿಂದ ಅನುಷ್ಠಾನವಾಗಿರುವ ಯೋಜನೆಗಳು ಎಷ್ಟು; ಹೂಡಿಕೆಯ ಒಟ್ಟು ಮೊತ್ತ ಎಷ್ಟು; ಸೃಷ್ಟಿಯಾದ ಉದ್ಯೋಗಗಳು ಎಷ್ಟು? (ವಲಯವಾರು, ವರ್ಷಾವರು ಪ್ರತ್ಯೇಕ ವಿವರಗಳನ್ನು ನೀಡುವುದು)

# ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೆಚ್ಚುವರಿ ಹುದ್ದೆ ತುಂಬುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೩೧೦ (೩೪೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಹುದ್ದೆಗಳನ್ನು ತುಂಬಲು ಯಾವಾಗ ಪ್ರಕಟಣೆ ಹೊರಡಿಸಲಾಯಿತು ; ಸದರಿ ಪ್ರಕಟಣೆಯಂತೆ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; (ವಿವರ ನೀಡುವುದು)

(ಇ) ನೇಮಕಾತಿ ಮೂಲ ಪ್ರಕಟಣೆಯನ್ನು ಬದಲಾವಣೆ ಮಾಡಿ ನೇಮಕಾತಿ ಪ್ರಕ್ರಿಯೆಯಲ್ಲಿ ಬದಲಾವಣೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಸದರಿ ಹುದ್ದೆಗಳಲ್ಲಿ ಇದುವರೆಗೆ ೧೦೦ ಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡದಿರಲು ಕಾರಣಗಳೇನು ; ಸದರಿ ಹುದ್ದೆಗಳಿಗೆ ಯಾವ ಕಾಲಮಿತಿಯಲ್ಲಿ ನೇಮಕಾತಿ ಆದೇಶ ನೀಡಲಾಗುತ್ತದೆ ; (ವಿವರ ನೀಡುವುದು)

(ಉ) ಖಾಲಿ ಉಳಿದಿರುವ ಹುದ್ದೆಗಳನ್ನು ಹೆಚ್ಚುವರಿ ಪಟ್ಟಿಯ ಮೂಲಕ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆಯೇ ?

## ೧೯೯೪-೯೫ ನೇ ಸಾಲಿನವರೆಗಿನ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೩೧೧ (೩೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೧೯೮೬-೮೭ ರಿಂದ ೧೯೯೪-೯೫ರ ಸಾಲಿನಲ್ಲಿ ಪ್ರಾರಂಭವಾಗಿರುವ ಅನುದಾನರಹಿತ ಪ್ರೌಢಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳೆಷ್ಟು ; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಇದುವರೆವಿಗೆ ಎಷ್ಟು ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ ; (ವಿವರ ನೀಡುವುದು)

(ಇ) ಉಳಿದಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸದಿರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುತ್ತದೆ; (ವಿವರ ನೀಡುವುದು)

(ಈ) ಈ ಅವಧಿಯಲ್ಲಿ ಪ್ರಾರಂಭವಾಗಿ ನಡೆಯುತ್ತಿರುವ ಸ್ಥಳಾಂತರ / ಹಸ್ತಾಂತರಗೊಂಡಿರುವ ಶಾಲಾ ಕಾಲೇಜುಗಳೆಷ್ಟು; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಉ) ಈ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸದೆ ಇರಲು ಕಾರಣಗಳೇನು ?

# ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೩೧೨ (೩೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಖಾಸಗಿ ಅನುದಾನಿತ ಪ್ರಾಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ಇತ್ಯಾದಿ ಕಾರಣಗಳಿಂದ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ೨೦೧೬ರ ಹಿಂದಿನ ನಿಯಮಗಳನ್ವಯ ನೇಮಕಾತಿ ಹೊಂದಿರುವ ಶಿಕ್ಷಕರನ್ನು ಅನುಮೋದನೆ ಮಾಡದೆ ಇರಲು ಕಾರಣಗಳೇನು ;

(ಇ) ಹೊಸ ನೇಮಕಾತಿ ನಿಯಮಗಳು ಜಾರಿಗೆ ಬರುವ ಮುನ್ನ ನೇಮಕಾತಿ ಹೊಂದಿ ಸತತವಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನು ವೇತನಾನುದಾನಕ್ಕೊಳಪಡಿಸಲಾಗುವುದೇ ; (ವಿವರ ನೀಡುವುದು)

(ಈ) ಬಹುತೇಕ ಹುದ್ದೆಗಳು ಖಾಲಿ ಇರುವುದರಿಂದ ಶಿಕ್ಷಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ೨೦೧೭ರ ಡಿಸೆಂಬರ್ ತಿಂಗಳಿನವರೆಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗುವುದೇ? (ವಿವರ ನೀಡುವುದು)

## ಉಡುಪಿ ಜಿಲ್ಲೆಯ ಕೆಂಪುಕಲ್ಲು, ಶಿಲೆ ಕಲ್ಲು ಗಣಿಗಾರಿಕೆಯ ಚಟುವಟಿಕೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೩ (೪೨೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಿಂದ ಉಡುಪಿ ಜಿಲ್ಲೆಯಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಹೊಸದಾಗಿ ನೀಡಲಾದ ಕೆಂಪುಕಲ್ಲು, ಶಿಲೆಕಲ್ಲು ಗಣಿಗಾರಿಕೆ, ಮರಳು ಗಣಿಗಾರಿಕೆ ಪರವಾನಿಗೆಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ; (ವರ್ಷವಾರು, ಗ್ರಾಮವಾರು ಹಾಗೂ ಪರವಾನಗೆದಾರರ ಹೆಸರಿನ ವಿವರ ಒದಗಿಸುವುದು)

(ಆ) ೨೦೧೭–೧೮ನೇ ಸಾಲಿನಲ್ಲಿ ನವೀಕರಣ ಮಾಡಿದ ಕೆಂಪುಕಲ್ಲು, ಶಿಲೆಕಲ್ಲು ಗಣಿಗಾರಿಕೆ, ಮರಳು ಗಣಿಗಾರಿಕೆ ಪರವಾನಗೆಗಳ ಸಂಖ್ಯೆ ಎಷ್ಟು ; ತಡೆಹಿಡಿದ ಪ್ರಕರಣಗಳ ಸಂಖ್ಯೆ ಎಷ್ಟು; ತಿರಸ್ಕರಿಸಿದ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣವಾರು ವಿವರ ನೀಡುವುದು)

(ಇ) ೨೦೧೫–೧೬ನೇ ಸಾಲಿನಿಂದ ಈ ದಿನಾಂಕದವರೆಗೆ ಕೆಂಪುಕಲ್ಲು, ಶಿಲೆಕಲ್ಲು ಗಣಿಗಾರಿಕೆ, ಮರಳು ಗಣಿಗಾರಿಕೆಯ ಕುರಿತಾಗಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಪೊಲೀಸ್ ಇಲಾಖೆಯಲ್ಲಿ ದೂರು ದಾಖಲಿಸಿದ ಪ್ರಕರಣಗಳ ಸಂಖ್ಯೆ ಎಷ್ಟು ; ಅವು ಯಾವುವು? (ದೂರಿನ ಪ್ರತಿಯನ್ನು ಒದಗಿಸುವುದು)

## ೧೯೯೪ ರಿಂದ ೨೦೧೭ರವರೆಗೆ ನೇಮಕಾತಿ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೪ (೩೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೪ ರಿಂದ ೨೦೧೭ರವರೆಗೆ ವರ್ಷಾವಾರು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯಿತಿ ಗ್ರೇಡ್–೨/ ಗ್ರೇಡ್–೧ ಕಾರ್ಯದರ್ಶಿ, ಪಿ.ಡಿ.ಓ ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮದಂತೆ ಒಟ್ಟು ಲಭ್ಯವಾಗುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಈ ಅವಧಿಯಲ್ಲಿ ನೇರ ನೇಮಕಾತಿ ಹಾಗೂ ಬಡ್ತಿ ನೀಡಲಾದ ಹುದ್ದೆಗಳ ಸಂಖ್ಯೆ ಎಷ್ಟು; ನೇರ ನೇಮಕಾತಿ ಮತ್ತು ಬಡ್ತಿ ಕೋಟಾದಲ್ಲಿ ಹೆಚ್ಚುವರಿ ಅಥವಾ ಕಡಿಮೆಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ನೇಮಕವಾದ ನೌಕರರ ಹೆಸರು ಮತ್ತು ಪ್ರವರ್ಗದ ಬಗೆಗಿನ ಮಾಹಿತಿ ನೀಡುವುದು?

## ಸಹಾಯಕ ನಿರ್ದೇಶಕರಿಗೆ ಬಡ್ತಿ ನೀಡುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೫ (೩೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಸಹಾಯಕ ನಿರ್ದೇಶಕರ ಹುದ್ದೆಗೆ ಬಡ್ತಿ ನೀಡುವಾಗ ಇಲಾಖಾ ಮುಂಬಡ್ತಿ ಸಮಿತಿಯ ಸಭೆ ನಡೆಸಲಾಗಿದೆಯೇ ; ಹಾಗಿದ್ದಲ್ಲಿ, ಇಲಾಖಾ ಮುಂಬಡ್ತಿ ಸಮಿತಿಯ ಕಡತ ಟಿಪ್ಪಣಿ ಪ್ರತಿ ಹಾಗೂ ಪರೀಕ್ಷಿಸಿದ ದಾಖಲೆಗಳ ಪ್ರತಿ ನೀಡುವುದು?

## ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೬ (೩೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಗ್ರಾಮ ಪಂಚಾಯಿತಿ ಗ್ರೇಡ್–೨ /ಗ್ರೇಡ್–೧ ಕಾರ್ಯದರ್ಶಿ, ಪಿ.ಡಿ.ಒ., ಸಹಾಯಕ ನಿರ್ದೇಶಕರು, ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಹುದ್ದೆಗಳಗೆ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ ೧೩೦ ಸೇವಿಡಿ ೨೦೦೭, ದಿನಾಂಕ: ೦೮.೧೦. ೨೦೦೭ ರನ್ವಯ ವೃಂದ ಮತ್ತು ನೇಮಕಾತಿ ನಿಯಮಗಳ/ತಿದ್ದುಪಡಿಗಳು, ರಚನೆಯಾದ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು?

## ಹೊಸ ಗ್ರಾಮ ಪಂಚಾಯ್ತಿಗಳಿಗೆ (ಕಛೇರಿಗಳಿಗೆ) ಮೂಲಭೂತ ಸೌಕರ್ಯ ಕಲ್ಪಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೧೭ (೩೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಘೋಷಣೆಗೊಂಡ ಹೊಸ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಇವು ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ;

(ಆ) ಈ ನೂತನ ಗ್ರಾಮ ಪಂಚಾಯತಿಗಳಿಗೆ ಮೂಲಭೂತ ಸೌಕರ್ಯಕ್ಕೆಂದು ಅಂದಾಜಿಸಲಾಗಿರುವ ಹಣವೆಷ್ಟು ; ಇದುವರೆಗೆ ಬಿಡುಗಡೆ ಮಾಡಲಾಗಿರುವ ಹಣವೆಷ್ಟು; (ವಿವರ ನೀಡುವುದು)

(ಇ) ನೂತನ ಗ್ರಾಮ ಪಂಚಾಯತಿ ಕಛೇರಿಗಳು ಸೂಕ್ತ ಕಟ್ಟಡ ಮತ್ತು ಪೀಠೋಪಕರಣ ಮೊದಲಾದ ಮೂಲ ಸೌಕರ್ಯದ ಕೊರತೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ನಿಟ್ಟಿನಲ್ಲಿ ಮೂಲಸೌಕರ್ಯ ಒದಗಿಸಲು ಸೂಕ್ತ ಹಣ ಬಿಡುಗಡೆ ಮಾಡಲು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು?

## ೧೦ನೇ ತರಗತಿ, ೨ನೇ ಪಿ.ಯು.ಸಿ ಪರೀಕ್ಷೆಗಳನ್ನು ಮೊದಲೇ (ಪೂರ್ವಭಾವಿಯಾಗಿ) ನಡೆಸುತ್ತಿರುವುದರಿಂದ ವಿದ್ಯಾರ್ಥಿಗಳಲ್ಲಿ ಮತ್ತು ಶಿಕ್ಷಕರಲ್ಲಿ ಆಗಿರುವ ಒತ್ತಡ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೧೮(೩೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ಶೈಕ್ಷಣಿಕ ವರ್ಷದಲ್ಲಿ ೧೦ನೇ ತರಗತಿ, ದ್ವಿತೀಯ ಪಿಯುಸಿ ಪರೀಕ್ಷೆಗಳನ್ನು ಪ್ರತಿ ವರ್ಷದಂತೆ ಮಾಡದೆ ಅವಧಿಗೂ ಮುನ್ನ ನಡೆಸುತ್ತಿರುವುದು ನಿಜವೇ ; ಎಷ್ಟು ದಿನದ ಮೊದಲು ನಡೆಸಲಾಗುತ್ತಿದೆ; ವಿವರ ನೀಡುವುದು ;

(ಆ) ಶಿಕ್ಷಕರುಗಳಿಗೆ ಪಾಠ ಮಾಡಲು ಎಷ್ಟು ದಿನಗಳ ಕೊರತೆಯಾಗುತ್ತದೆ; ಅದನ್ನು ಸರಿದೂಗಿಸಲು ಯಾವ ರೀತಿಯ ನಿರ್ದೇಶನವನ್ನು ನೀಡಲಾಗಿದೆ ;

(ಇ) ನಿಜವಾಗಿದ್ದಲ್ಲಿ, ಶಿಕ್ಷಕರುಗಳಿಗೆ ಪಾಠ ಮಾಡುವ ಹಾಗೂ ವಿದ್ಯಾರ್ಥಿಗಳಿಗೆ ಪಾಠಗಳನ್ನು ಅರಿಯುವ ಸಂಬಂಧ ಮಾನಸಿಕ ಒತ್ತಡ ಉಂಟಾಗುವುದಿಲ್ಲವೇ ;

(ಈ) ಈ ರೀತಿಯ ಒತ್ತಡವನ್ನು ಕಡಿಮೆ ಮಾಡಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಬೆಂಗಳೂರಿನಿಂದ ಬೇರೆ ಜಿಲ್ಲೆಗಳಿಗೆ ಹೋಗುವ ಖಾಸಗಿ ಬಸ್ಸುಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಿಂದ ಹಬ್ಬ ಮತ್ತು ರಜಾ ದಿನಗಳಲ್ಲಿ ಮೂರ್ನಾಲ್ಕು ಪಟ್ಟು ಹೆಚ್ಚುವರಿ ಹಣ ವಸೂಲು ಮಾಡುತ್ತಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೮೯ (೩೫೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಿಂದ ಬೀದರ್, ವಿಜಯಪುರ (ಬಿಜಾಪುರ), ಹುಬ್ಬಳ್ಳಿ, ಬೆಳಗಾವಿ, ಮಂಗಳೂರು ಮೊದಲಾದ ಕಡೆ ಹೋಗುವ ವಿವಿಧ ದರ್ಜೆಯ ಸರ್ಕಾರಿ ಸಾರಿಗೆ ಬಸ್ಸುಗಳ ದರಗಳಲ್ಲಿ ಕೆಲಸದ ದಿನಗಳಿಗೂ ಹಾಗೂ ರಜಾ ದಿನಗಳಿಗೂ ವ್ಯತ್ಯಾಸವಿದೆಯೇ ; ವ್ಯತ್ಯಾಸವಿದ್ದಲ್ಲಿ, ಈ ರೀತಿ ಮಾಡಲು ಅವಕಾಶವಿದೆಯೇ ; (ವಿವರ ನೀಡುವುದು)

(ಆ) ಬೆಂಗಳೂರಿನಿಂದ ಬೀದರ್, ವಿಜಯಪುರ (ಬಿಜಾಪುರ), ಹುಬ್ಬಳ್ಳಿ, ಬೆಳಗಾವಿ, ಮಂಗಳೂರು ಮೊದಲಾದ ಕಡೆ ಹೋಗುವ ಮತ್ತು ಬರುವ ಖಾಸಗಿ ಬಸ್ಸುಗಳಲ್ಲಿ ಕೆಲಸದ ದಿನಗಳಿಗಿಂತ ಮೂರ್ನಾಲ್ಕು ಪಟ್ಟು ಹೆಚ್ಚುವರಿ ಹಣವನ್ನು ಶನಿವಾರ, ಭಾನುವಾರಗಳಂದು ಮತ್ತು ಹಬ್ಬದ ರಜಾದಿನಗಳಂದು ಪ್ರಯಾಣಿಕರಿಂದ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದು ಕಾನೂನು ಬಾಹಿರವಲ್ಲವೇ; (ವಿವರ ನೀಡುವುದು)

(ಇ) ಈ ರೀತಿ ಮೂರ್ನಾಲ್ಕು ಪಟ್ಟು ಹೆಚ್ಚುವರಿ ಹಣವನ್ನು ಸಂಗ್ರಹಿಸಲು ಅನುಮತಿಯನ್ನು ಸರ್ಕಾರದಿಂದ ನೀಡಲಾಗಿದೆಯೇ ;

(ಈ) ಇಷ್ಟೇ ಹೆಚ್ಚುವರಿ ಹಣ ವಸೂಲು ಮಾಡುವ ಕುರಿತು ಸರ್ಕಾರದಿಂದ ನಿಯಮ ರೂಪಿಸಲಾಗಿದೆಯೇ ? (ಈ ಸಂಬಂಧ ವಿವರ ನೀಡುವುದು)

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ಆಗಿರುವ ಅಭಿವೃದ್ಧಿಯ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೨೦ (೩೫೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೂತನವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪ್ರಾರಂಭಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಯಾವ ರೀತಿಯ ಪ್ರೋತ್ಸಾಹಕ ಯೋಜನೆಗಳಿವೆ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಪ್ರಾರಂಭವಾಗಿರುವ ನೂತನ ಖಾಸಗಿ ಹಾಗೂ ಸರ್ಕಾರಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ನೂತನ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಿಂದ ಎಷ್ಟು ಮೊತ್ತದ ಹಣ ಹೂಡಿಕೆಯಾಗಿದೆ; ಈ ಸಂಬಂಧ ಇಲಾಖೆಯು ಇಟ್ಟುಕೊಂಡಿದ್ದ ಗುರಿ ಹಾಗೂ ಸಾಧನೆಯ ಕುರಿತು ಸಂಕ್ಷಿಪ್ತ ವಿವರ ನೀಡುವುದು ;

(ಈ) ಇದರಿಂದಾಗಿ ಎಷ್ಟು ಪ್ರಮಾಣದಲ್ಲಿ ಉದ್ಯೋಗ ಲಭಿಸಿದೆ ? (ವಿವರ ನೀಡುವುದು)

## ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೧ (೪೦೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾಲೇಜುಗಳವಾರು ಮಾಹಿತಿ ನೀಡುವುದು;

(ಆ) ಹಾಗಿದ್ದಲ್ಲಿ, ಯಾವ ಯಾವ ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ ಇದೆ; ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗುವುದು;

(ಇ) ೨೦೧೬–೧೭ ಹಾಗೂ ೨೦೧೭–೧೮ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಬಿಡುಗಡೆ ಮಾಡಿರುವ ಅನುದಾನವೆಷ್ಟು? (ಬಿಡುಗಡೆ ಮಾಡಿದ್ದಲ್ಲಿ, ಸ್ಪಷ್ಟ ಮಾಹಿತಿ ನೀಡುವುದು)

## ರಸ್ತೆ ದುರಸ್ಥಿಗೆ ಅನುದಾನ ಬಿಡುಗಡೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೨ (೪೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಗೆ ಎಷ್ಟು ಕಿಲೋ ಮೀಟರ್ ರಸ್ತೆಗಳು ಒಳಪಡುತ್ತವೆ; (ಕ್ಷೇತ್ರವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ರಸ್ತೆಗಳ ನಿರ್ವಹಣೆ ಮತ್ತು ಅಭಿವೃದ್ಧಿಗಾಗಿ ಮಂಜೂರಾದ ಒಟ್ಟು ಅನುದಾನ ಎಷ್ಟು; ಆ ಪೈಕಿ ಬಿಡುಗಡೆ ಮಾಡಲಾದ ಹಾಗೂ ವೆಚ್ಚ ಮಾಡಲಾಗಿರುವ ಮೊತ್ತ ಎಷ್ಟು; (ವಿವರ ನೀಡುವುದು)

(ಇ) ಇಲಾಖೆಯ ರಸ್ತೆಗಳು ಸಂಪೂರ್ಣವಾಗಿ ಹಾಳಾಗಿರುವುದರಿಂದ ಬಸ್ ಸಂಚಾರ ಸ್ಥಗಿತಗೊಂಡು, ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುವುದರಿಂದ ದುರಸ್ಥಿಗಾಗಿ ಕೂಡಲೇ ಅಗತ್ಯ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಮಾಹಿತಿ ನೀಡುವುದು)

## ಮಲೇಷ್ಯಾದಿಂದ ಮರಳು ಆಮದು ಮಾಡಿಕೊಳ್ಳುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೩ (೪೦೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಮಲೇಷ್ಯಾದಿಂದ ಮರಳನ್ನು ಆಮದು ಮಾಡಿಕೊಳ್ಳಲು ಟೆಂಡರ್ ಕರೆದಿದ್ದು ಯಾವಾಗ; ಟೆಂಡರ್‌ನಲ್ಲಿ ಭಾಗವಹಿಸುವ ಸಂಸ್ಥೆಗಳಿಗೆ ವಿಧಿಸಿದ್ದ ಟೆಂಡರ್ ಷರತ್ತುಗಳೇನು; (ವಿವರ ನೀಡುವುದು)

(ಆ) ಟೆಂಡರ್‌ನಲ್ಲಿ ಭಾಗವಹಿಸಿದ್ದ ಸಂಸ್ಥೆಗಳು ಯಾವುವು; ಈ ಸಂಸ್ಥೆಗಳು ಟೆಂಡರ್‌ನಲ್ಲಿ ನಮೂದಿಸಿದ್ದ ಮೊತ್ತ ಎಷ್ಟು; ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿದೆ; ಮಾಡಿಕೊಂಡಿರುವ ಒಡಂಬಡಿಕೆಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಟೆಂಡರ್ ಪಡೆದಿರುವ ಸಂಸ್ಥೆ ಎಲ್ಲಿ ಮತ್ತು ಯಾವ ಸಾಲಿನಲ್ಲಿ ನೋಂದಣಿಯಾಗಿದೆ; (ನೋಂದಣಿ ಪತ್ರದ ಪ್ರತಿ ನೀಡುವುದು) ಸಂಸ್ಥೆಯ ಲೆಟರ್ ಹೆಡ್‌ನಲ್ಲಿರುವ ಪೋಸ್ಟ್ ಬಾಕ್ಸ್ ನಂಬರ್ ಮತ್ತು ದೂರವಾಣಿ ಸಂಖ್ಯೆ ಬೇರೆ ಕಂಪನಿ ಹೆಸರಿನಲ್ಲಿದ್ದು, ಇ–ಮೇಲ್ ಕೂಡ ವ್ಯತ್ಯಾಸವಿದ್ದು, ಟೆಂಡರ್ ನಿಯಮಗಳು

ಉಲ್ಲಂಘನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ವಿಚಾರಗಳ ಕುರಿತು ಸರ್ಕಾರದ ಅಭಿಪ್ರಾಯಗಳೇನು;

(ಈ) ನೆರೆಯ ರಾಜ್ಯಗಳಲ್ಲಿ ಟನ್ ಮರಳಿಗೆ ನಿಗಧಿಪಡಿಸಿರುವ ದರ ಎಷ್ಟು; ರಾಜ್ಯದಲ್ಲಿ ಮಾರಾಟ ಮಾಡುತ್ತಿರುವ ಮರಳಿನ ದರ ಎಷ್ಟು; ನೆರೆಯ ರಾಜ್ಯಕ್ಕೆ ಹೋಲಿಸಿದರೆ ರಾಜ್ಯದಲ್ಲಿ ಮರಳಿನ ದರ ಹೆಚ್ಚಳವಾಗಲು ಕಾರಣಗಳೇನು?

## ಉದ್ಯೋಗ ಭರವಸೆ ಯೋಜನೆಯ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೪ (೪೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಉದ್ಯೋಗ ಭರವಸೆ ಯೋಜನೆಯಡಿಯಲ್ಲಿ ಕೈಗೆತ್ತಿಕೊಂಡಿರುವ ಹೊಸ ಯೋಜನೆಗಳು ಯಾವುವು; ಬಿಡುಗಡೆಯಾದ ಅನುದಾನವೆಷ್ಟು; (ವಿಧಾನಸಭೆ ಕ್ಷೇತ್ರವಾರು, ವರ್ಷವಾರು, ಯೋಜನೆವಾರು ಮಾಹಿತಿ ನೀಡುವುದು)

(ಆ) ೨೦೧೭–೧೮ ಸಾಲಿನಲ್ಲಿ ಕೈಗೊಳ್ಳಲಿರುವ ಹೊಸ ಯೋಜನೆಗಳಾವುವು ; (ವಿವರ ನೀಡುವುದು)

(ಇ) "ನಮ್ಮ ಹೊಲ ನಮ್ಮ ರಸ್ತೆ" ಯೋಜನೆಯನ್ನು ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಗ್ರಾಮ ಪಂಚಾಯಿತಿಗಳಲ್ಲಿ ಪ್ರಾರಂಭಿಸಲಾಗಿದೆ; (ಗ್ರಾಮ ಪಂಚಾಯತಿಗಳವಾರು ಮಾಹಿತಿ ನೀಡುವುದು)

(ಈ) ಈ ಯೋಜನೆಯನ್ನು ಅನುಷ್ಠಾನಗೊಳಿಸದಿರುವ ಗ್ರಾಮ ಪಂಚಾಯತಿಗಳ ಅಧಿಕಾರಿ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಬಸ್–ಬೇ ಹಾಗೂ ಟಿ.ಟಿ.ಎಂ.ಸಿ. ಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೨೫ (೩೧೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ ಸ್ಟಾಪ್ (ನಿಲ್ದಾಣ) ಗಳಲ್ಲಿ ಬೇ ಎಷ್ಟು ಸಂಖ್ಯೆಯಲ್ಲಿದೆ; ಬಸ್–ಬೇ ಇಲ್ಲದೆ ಇರುವ ಬಸ್ ನಿಲ್ದಾಣಗಳ ಸಂಖ್ಯೆ ಎಷ್ಟು; (ಸಂಪೂರ್ಣವಾದ ವಿವರಗಳನ್ನು ನೀಡುವುದು)

(ಆ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಇಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನರ್ಮ್ ಯೋಜನೆ ಅಡಿಯಲ್ಲಿ ನಿರ್ಮಿಸಲಾಗಿರುವ ಟಿ.ಟಿ.ಎಂ.ಸಿ. ಗಳ ಸಂಖ್ಯೆ ಎಷ್ಟು; (ಸಂಪೂರ್ಣವಾದ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಟಿ.ಟಿ.ಎಂ.ಸಿ. ಗಳಿಂದ ಯಾವ್ಯಾವ ಸ್ಥಳಗಳಲ್ಲಿ ಎಷ್ಟು ಕಟ್ಟಡಗಳನ್ನು ಬಾಡಿಗೆ/ಗುತ್ತಿಗೆಗೆ ನೀಡಲಾಗಿದೆ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) ನಗರ ಸಾರಿಗೆ ಬಸ್ ಚಾಲಕರಿಗೆ ಬಸ್ ನಿಲ್ದಾಣದಲ್ಲಿ ಬೇರೆ ವಾಹನಗಳಿಗೆ/ಸಾರ್ವಜನಿಕರಿಗೆ ತೊಂದರೆ ಆಗದ ರೀತಿ ಬಸ್‌ಗಳನ್ನು ನಿಲ್ಲಿಸಲು ಸೂಚಿಸಲಾಗಿದೆಯೇ; ಇದ್ದಲ್ಲಿ, ಸಂಪೂರ್ಣವಾದ ವಿವರಗಳನ್ನು ನೀಡುವುದು?

## ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ ) :–**

೩೨೬ (೩೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸರ್ಕಾರವು ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯಕ್ಕೆ ಎಷ್ಟು ಎಕರೆ ಭೂಮಿಯನ್ನು ಒದಗಿಸಿರುತ್ತದೆ; ಸದರಿ ವಿಶ್ವವಿದ್ಯಾಲಯವನ್ನು ಎಲ್ಲಿ ಮತ್ತು ಯಾವ ಶೈಕ್ಷಣಿಕ ವರ್ಷದಿಂದ ತೆರೆಯಲಾಗುವುದು;

(ಆ) ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯಕ್ಕೆ ಉಪ ಕುಲಪತಿಗಳು, ಕುಲ ಸಚಿವರು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯನ್ನು ನೇಮಿಸಲಾಗಿದೆಯೇ; ನೇಮಿಸದೇ ಇದ್ದಲ್ಲಿ, ಈ ಸಿಬ್ಬಂದಿಯನ್ನು ತುಂಬಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; ಸದರಿ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ಚಟುವಟಿಕೆಗಳ ಕುರಿತು ರಾಜ್ಯ ಸರ್ಕಾರ ಯೋಜನೆಯನ್ನು ರೂಪಿಸಿರುತ್ತದೆಯೇ;

(ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕರ್ನಾಟಕದಲ್ಲಿ ಎಷ್ಟು ಗ್ರಾಮಗಳನ್ನು ಪರಂಪರಾಗತ ಗ್ರಾಮಗಳೆಂದು ಗುರುತಿಸಿರುತ್ತದೆ; (ವಿವರಗಳನ್ನು ನೀಡುವುದು) ಇವುಗಳ ಪುನರ್ ನಿರ್ಮಾಣಕ್ಕೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿರುತ್ತದೆ;

(ಈ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕರ್ನಾಟಕದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ೦೭–೦೪–೨೦೧೬

ರಿಂದ ಎಷ್ಟು ಎಕರೆ ಪ್ರದೇಶದಲ್ಲಿ ತೋಟಗಾರಿಕೆ ಕ್ಷೇತ್ರಗಳನ್ನು ಅಭಿವೃದ್ಧಿ ಪಡಿಸಿರುತ್ತದೆ; ವಾರ್ಷಿಕ ಎಷ್ಟು ಎಕರೆ ಪ್ರದೇಶದಲ್ಲಿ ತೋಟಗಾರಿಕೆ ಅಭಿವೃದ್ಧಿ ಪಡಿಸಲು ಯೋಜನೆಯನ್ನು ಹಮ್ಮಿಕೊಳ್ಳಲಾಗಿರುತ್ತದೆ?

## ವಿಮಾನ ನಿಲ್ದಾಣಗಳ ಮಾಹಿತಿ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ ) :–**

೩೨೭ (೪೧೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಅಂತರ್‌ರಾಷ್ಟ್ರೀಯ ಹಾಗೂ ರಾಷ್ಟ್ರೀಯ ವಿಮಾನ ನಿಲ್ದಾಣಗಳು ಇವೆ; ಸದರಿ ವಿಮಾನ ನಿಲ್ದಾಣಗಳಿಗೆ ರಾಜ್ಯ ಸರ್ಕಾರವು ಎಷ್ಟು ಭೂಮಿ ಹಸ್ತಾಂತರ ಮಾಡಿರುತ್ತದೆ; ಹಸ್ತಾಂತರಕ್ಕೆ ಬಾಕಿ ಇರುವ ಭೂಮಿಯ ವಿಸ್ತೀರ್ಣ ಎಷ್ಟು; ಯಾವ ಯಾವ ವಿಮಾನ ನಿಲ್ದಾಣಗಳನ್ನು ಯಾವ ಯಾವ ಕಂಪನಿಗಳಿಗೆ/ಸಂಸ್ಥೆಗಳಿಗೆ ನಿರ್ವಹಣೆಗಾಗಿ ವಹಿಸಲಾಗಿರುತ್ತದೆ;

(ಆ) ರಾಜ್ಯದಲ್ಲಿ ಯಾವ ಯಾವ ವಿಮಾನ ನಿಲ್ದಾಣಗಳ ಕಾಮಗಾರಿಗಳು ಪೂರ್ಣಗೊಂಡಿರುತ್ತವೆ; ಮತ್ತು ಬಾಕಿ ಇರುವ ಕಾಮಗಾರಿಗಳು ಯಾವುವು; ಆಡಳಿತಾತ್ಮಕ ಅನುಮೋದನೆಗೆ ಬಾಕಿ ಇರುವ ಕಾಮಗಾರಿಗಳು ಎಷ್ಟು; ಅನುಮೋದನೆಗೊಂಡ ಕಾಮಗಾರಿಗಳನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ;

(ಇ) ರಾಜ್ಯದಲ್ಲಿ ಎಷ್ಟು ಅನಿಲ ಕೊಳವೆ ಮಾರ್ಗಗಳನ್ನು ಅಳವಡಿಸಲಾಗಿದೆ; ಅನಿಲ ಕೊಳವೆ ಕಾಮಗಾರಿ

ಪೂರ್ಣಗೊಂಡಿರುವ ಯೋಜನೆಗಳು ಎಷ್ಟು; ಬಾಕಿ ಇರುವ ಅನಿಲ ಯೋಜನೆಗಳ ಕಾಮಗಾರಿ ಎಷ್ಟು; ಇವುಗಳನ್ನು (ಕಾಮಗಾರಿ) ಯಾವ ಯಾವ ಇಲಾಖೆಗಳಿಗೆ/ಸಂಸ್ಥೆಗಳಿಗೆ ನೀಡಲಾಗಿದೆ;

(ಈ) ಕೆ.ಎಸ್.ಐ.ಐ.ಡಿ.ಸಿ. ಯಲ್ಲಿ ವಿಮಾನಯಾನ ಅಭಿವೃದ್ಧಿ ಕೋಶವನ್ನು ತೆರೆಯಲಾಗಿದೆಯೇ; ತೆರೆದಿದ್ದಲ್ಲಿ, ಇದರ ಕಾರ್ಯವ್ಯಾಪ್ತಿ ಏನು; ಎಂದಿನಿಂದ ಇದರ ಸೇವೆ ಸಾರ್ವಜನಿಕರಿಗೆ ದೊರೆಯುತ್ತಿದೆ; ಇದರ ಮೇಲೆ ವಾರ್ಷಿಕವಾಗಿ ವಿನಿಯೋಗಿಸುತ್ತಿರುವ ಹಣ ಎಷ್ಟು?

## ಪ್ರಾದೇಶಿಕ ಸಾರಿಗೆ ಇಲಾಖೆ ಸಿ.ಸಿ. ಟಿ.ವಿ. ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ ) :–**

೩೨೮ (೩೯೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಎಲ್.ಎಲ್ ಮತ್ತು ಡಿ.ಎಲ್. ಗಳನ್ನು ನೀಡಲು ಸ್ವಯಂಚಾಲಿತ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆಯೇ; ಇಲ್ಲದೇ ಇದ್ದಲ್ಲಿ, ಯಾವಾಗ ಇದನ್ನು ಸ್ವಯಂಚಾಲಿತಗೊಳಿಸಲಾಗುವುದು;

(ಆ) ರಾಜ್ಯ ರಸ್ತೆ ಸಾರಿಗೆ ಹಾಗೂ ಬಿ.ಎಂ.ಟಿ.ಸಿ. ಯ ಬಸ್ ನಿಲ್ದಾಣಗಳಲ್ಲಿ ಹಾಗೂ ಎಲ್ಲಾ ಡಿಪೋಗಳಲ್ಲಿ ಸಿ.ಸಿ. ಟಿ.ವಿ. ಯನ್ನು ಅಳವಡಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವಾಗ ಅಳವಡಿಸಲಾಗುವುದು; ರಾಜ್ಯ ರಸ್ತೆ ಸಾರಿಗೆಯ ಒಟ್ಟು ಬಸ್ಸುಗಳಲ್ಲಿ ಎಷ್ಟು ಬಸ್ಸುಗಳಿಗೆ ಸಿ.ಸಿ. ಟ.ವಿ. ಯನ್ನು ಅಳವಡಿಸಲಾಗಿದೆ;

(ಇ) ರಾಜ್ಯ ರಸ್ತೆ ಸಾರಿಗೆಯ ಎಲ್ಲಾ ವಿಭಾಗಗಳಲ್ಲಿ ವಾಹನ ಟ್ರ್ಯಾಕಿಂಗ್ ಘಟಕಗಳನ್ನು ಸ್ಥಾಪಿಸಲಾಗಿದೆಯೇ; ಸ್ಥಾಪಿಸಿದ್ದಲ್ಲಿ, ಇದರ ನಿರ್ವಹಣೆಯನ್ನು ಯಾವ ಗುತ್ತಿಗೆದಾರರಿಗೆ ಯಾವ ಮಾನದಂಡದ ಮೇಲೆ ನೀಡಲಾಗಿರುತ್ತದೆ; ಇದರ ಮೇಲೆ ವಿನಿಯೋಗಿಸಿರುವ ಒಟ್ಟು ಹಣ ಎಷ್ಟು;

(ಈ) ಬಿ.ಎಂ.ಟಿ.ಸಿ. ಯಲ್ಲಿ ಹಾಲಿ ಚಾಲನೆಯಲ್ಲಿರುವ ಮಿನಿ ಬಸ್ಸುಗಳ ಸಂಖ್ಯೆ ಎಷ್ಟು; ಹಾಗೂ ಹವಾ ನಿಯಂತ್ರಿತ ಬಸ್ಸುಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಮಿನಿ ಮತ್ತು ಸಾಮಾನ್ಯ ಬಸ್ಸುಗಳಿಂದ ಬರುತ್ತಿರುವ ವಾರ್ಷಿಕ ಆದಾಯ ಎಷ್ಟು; ಹವಾ ನಿಯಂತ್ರಿತ ಹಾಗೂ ಲಕ್ಸುರಿ ಬಸ್ಸುಗಳಿಂದ ಬರುತ್ತಿರುವ ಆದಾಯ ಎಷ್ಟು?

## ಅನುದಾನ ಪ್ರಸ್ತಾವನೆಗಳ ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ ) :-**

೩೨೯ (೩೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಅನುದಾನಕ್ಕೆ ಒಳಪಡಿಸಲು ಕೋರಿ ಬಾಕಿಯಿರುವ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಪ್ರಸ್ತಾವನೆಗಳು ಎಷ್ಟು; ಸದರಿ ಪ್ರಸ್ತಾವನೆಗಳು ಎಷ್ಟು ವರ್ಷದಿಂದ ಮತ್ತು ಯಾವ ಕಾರಣಕ್ಕಾಗಿ ಬಾಕಿ ಇರುತ್ತವೆ;

(ಆ) ಖಾಸಗಿ ಅನುದಾನಿತ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿರುವ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ

ನಿಗದಿಪಡಿಸಿರುವ ಕಾಲಮಿತಿ ಎಷ್ಟು; ಇದನ್ನು ವಿಸ್ತರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಸದರಿ ಹುದ್ದೆಗಳನ್ನು ತುಂಬಲು ಹಳೆಯ ನಿಯಮಾವಳಿಗಳ ಪ್ರಕಾರ ಅನುಮತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಖಾಸಗಿ ಅನುದಾನಿತ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳು ಅನುದಾನಕ್ಕೆ ಒಳಪಟ್ಟು ತದನಂತರ ಸ್ಥಳಾಂತರಗೊಳ್ಳಲು ಅವಕಾಶ ಇರುತ್ತದೆಯೇ; ಅವಕಾಶ ಇದ್ದಲ್ಲಿ, ಎಷ್ಟು ಸಂದರ್ಭದಲ್ಲಿ ಮತ್ತು ಯಾವ ಯಾವ ಸಂದರ್ಭಗಳಲ್ಲಿ ಸ್ಥಳಾಂತರಗೊಳ್ಳಬಹುದು;

(ಈ) ಖಾಸಗಿ ಅನುದಾನಿತ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕೇತರ ಸಿಬ್ಬಂದಿಯ ನೇಮಕಾತಿಗೆ ಅನುಮೋದನೆ ಕೋರಿ ಸರ್ಕಾರದ ಮುಂದೆ ಬಂದಿರುವ ಪ್ರಸ್ತಾವನೆಗಳು ಬಾಕಿ ಇರುತ್ತವೆಯೇ; ಬಾಕಿಯಿದ್ದಲ್ಲಿ, ಎಷ್ಟು ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ಕೋರಿರುತ್ತಾರೆ; ಸರ್ಕಾರ ಈ ಕುರಿತು ಯಾವಾಗ ಅನುಮೋದನೆ ನೀಡುತ್ತದೆ?

## ರಾಜ್ಯದಲ್ಲಿರುವ ಬಿ.ಎಡ್. ಕಾಲೇಜುಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ ) :–**

೩೩೦ (೩೯೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಬಿ.ಎಡ್. ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಅನುದಾನಕ್ಕೆ ಬಾಕಿಯಿರುವ ಬಿ.ಎಡ್. ಕಾಲೇಜುಗಳ ಸಂಖ್ಯೆ ಎಷ್ಟು; ಬಾಕಿ ಇದ್ದಲ್ಲಿ, ಸದರಿ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸದಿರಲು ಕಾರಣವೇನು;

(ಆ) ಅನುದಾನಕ್ಕೆ ಒಳಪಟ್ಟಿರುವ ಖಾಸಗಿ ಬಿ.ಎಡ್. ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಎಷ್ಟು ಕಾಲೇಜುಗಳು ಸರ್ಕಾರಕ್ಕೆ ಅರ್ಜಿಯನ್ನು ಸಲ್ಲಿಸಿರುತ್ತವೆ; ಅನುದಾನಕ್ಕೆ ಒಳಪಟ್ಟಿರುವ ಖಾಸಗಿ ಬಿ.ಎಡ್. ಕಾಲೇಜುಗಳ ಉಪನ್ಯಾಸಕರ ವೇತನವನ್ನು ಪ್ರತಿ ತಿಂಗಳು ಪಾವತಿ ಮಾಡಲಾಗುತ್ತಿದೆಯೇ; ಪಾವತಿ ಮಾಡದೇ ಇದ್ದಲ್ಲಿ, ಕಾರಣಗಳೇನು ;

(ಇ) ಎನ್.ಸಿ.ಟಿ.ಇ. ನಿಯಮಾವಳಿಗಳ ಅನುಸಾರವಾಗಿ ಶೈಕ್ಷಣಿಕ ವರ್ಷದ ಯಾವ ತಿಂಗಳಿನಲ್ಲಿ ಬಿ.ಎಡ್. ತರಗತಿಗಳನ್ನು ಪ್ರಾರಂಭಿಸಲಾಗುವುದು ; ಕರ್ನಾಟಕದಲ್ಲಿ ಯಾವ ತಿಂಗಳಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯಿಂದ ಪ್ರಕಟಣೆಯನ್ನು ಪ್ರಕಟಿಸಲಾಗುತ್ತಿದೆ ;

(ಈ) ಸಿ.ಎ.ಸಿ. (ಸೆಂಟ್ರಲ್ ಅಡ್‌ಮಿಷನ್ ಸೆಲ್) ಯಲ್ಲಿ ನೇಮಕ ಹೊಂದಿರುವ ಸಿಬ್ಬಂದಿ ಯಾವ ಇಲಾಖೆಗೆ ಸೇರಿದವರಾಗಿರುತ್ತಾರೆ; ಸದರಿ ಸಿಬ್ಬಂದಿಗಳನ್ನು ಕಾಲೇಜು ಶಿಕ್ಷಣ ಇಲಾಖೆಯ ಮೂಲಕ ನೇಮಕ ಮಾಡಲು ಸಾಧ್ಯವಿಲ್ಲವೆ;

(ಉ) ರಾಜ್ಯದ ಬಿ.ಎಡ್. ಕಾಲೇಜುಗಳ ಪ್ರವೇಶಕ್ಕೆ ನಿಗಧಿಪಡಿಸಿರುವ ಶುಲ್ಕ ಎಷ್ಟು; ಇದನ್ನು ಯಾವ ವರ್ಷದಿಂದ ನಿಗಧಿಗೊಳಿಸಲಾಗಿದೆ; ಹೆಚ್ಚುವರಿ ಶುಲ್ಕ ನಿಗಧಿಪಡಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ರಾಜ್ಯದ ಸರ್ಕಾರಿ ಶಾಲಾ/ಕಾಲೇಜುಗಳಲ್ಲಿ ICT-Phase 2 ಮತ್ತು IT@ ಕಂಪ್ಯೂಟರ್ ಶಿಕ್ಷಣ ಯೋಜನೆಗಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೧ (೩೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲಾ/ಕಾಲೇಜುಗಳಲ್ಲಿ ICT-Phase 2 ಮತ್ತು IT@ ಕಂಪ್ಯೂಟರ್ ಶಿಕ್ಷಣ ಯೋಜನೆಯಡಿ ಲ್ಯಾಬ್‌ಗಳಿಗೆ ನಿಗಧಿಪಡಿಸಿದ ಮೊತ್ತ ಎಷ್ಟು; (ಶಾಲಾವಾರು ವಿವರ ನೀಡುವುದು)

(ಆ) IT@ ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಕೇರಳ ರಾಜ್ಯದ ಮಾದರಿ ಅಡಿ ಬೋಧಕ ಶಿಕ್ಷಕರೇ ಕಂಪ್ಯೂಟರ್ ಶಿಕ್ಷಣವನ್ನು ಕಲ್ಪಿಸಬೇಕೆಂಬ ನಿಯಮ ನಮ್ಮ ರಾಜ್ಯಕ್ಕೆ ಹೊಂದುತ್ತದೆಯೇ; ಶಿಕ್ಷಕರ ಕೊರತೆ, ಶಿಕ್ಷಕರಿಗೆ ಅವರ ಬೋಧನಾ ವಿಷಯ ಬಿಟ್ಟು ಕಂಪ್ಯೂಟರ್ ಶಿಕ್ಷಣವನ್ನು ಮಕ್ಕಳಿಗೆ ಕಲಿಸಲು ಸಾಧ್ಯವಾಗುವುದೇ;

(ಇ) ICT-Phase 2 ಕಂಪ್ಯೂಟರ್ ಶಿಕ್ಷಣ ಯೋಜನೆಯಲ್ಲಿ ಉನ್ನತ ಪದವಿ ಪಡೆದು ೧ ವರ್ಷದ ಕಂಪ್ಯೂಟರ್ ಶಿಕ್ಷಣ ಪಡೆದು ಮಾಸಿಕ ರೂ.೩,೫೦೦ ಗಳಿಗೆ ಕೆಲಸ ನಿರ್ವಹಿಸಿ ಈಗ ನಿರುದ್ಯೋಗಿಗಳಾಗಿ ತುಂಬ ಕಷ್ಟದ ಜೀವನ ನಡೆಸುತ್ತಿರುವ ICT-Phase 2 ಕಂಪ್ಯೂಟರ್ ಶಿಕ್ಷಕರನ್ನೇ ಮಾನವೀಯತೆ ದೃಷ್ಟಿಯಿಂದ IT@ ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ಬೋಧಿಸಲು ಪರಿಗಣಿಸಲಾಗುವುದೇ;

(ಈ) ಕೇರಳ ಮಾದರಿ ವ್ಯವಸ್ಥೆಯನ್ನು ಬದಲಾಯಿಸಿ ೧೦೦ ಕ್ಕೂ ಹೆಚ್ಚು ಶಾಸಕರು, ೧೦ಕ್ಕೂ ಹೆಚ್ಚು ಸಚಿವರು ಹಾಗೂ ಸಂಘ ಸಂಸ್ಥೆಗಳ ಮಾನವಿಯತೆ IT@ ಶಾಲೆಗಳಲ್ಲಿ ICT-Phase 2 ಕಂಪ್ಯೂಟರ್ ಶಿಕ್ಷಣ ಯೋಜನೆಯಲ್ಲಿ ಕಾರ್ಯನಿರ್ವಹಿಸುವ ಶಿಕ್ಷಕರಿಗೆ ಅವಕಾಶ ಮಾಡಿ ಕೊಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ತಾಲ್ಲೂಕು ಪಂಚಾಯ್ತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅನ್ಯ ಇಲಾಖೆಯ ಅಧಿಕಾರಿಗಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೨ (೩೪೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ತಾಲ್ಲೂಕು ಪಂಚಾಯ್ತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಬಂದು ಕರ್ತವ್ಯ ನಿರ್ವಹಿಸುತ್ತಿರುವ ಅನ್ಯ ಇಲಾಖೆಯ ಅಧಿಕಾರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಲಾಖೆಯ ಕಾರ್ಯವೈಖರಿಯ ಬಗ್ಗೆ ಆಳವಾದ ಅರಿವು ಇರದ ಅನ್ಯ ಇಲಾಖಾ ನಿಯೋಜಿತ ಅಧಿಕಾರಿಗಳಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಕ್ರಮಗಳು ನಿರೀಕ್ಷಿತ ಮಟ್ಟದ ಗುರಿ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅನ್ಯ ಇಲಾಖಾ ನಿಯೋಜಿತ ಅಧಿಕಾರಿಗಳನ್ನು ಮಾತೃ ಇಲಾಖೆಗೆ ಕಳುಹಿಸಲು ಕ್ರಮ ವಹಿಸಲಾಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಕಾಲಕಾಲಕ್ಕೆ ಬಡ್ತಿ ಹಾಗೂ ನೇರ ನೇಮಕಾತಿ ಮೂಲಕ ಮಾತೃ ಇಲಾಖೆಯವರನ್ನೇ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ನೇಮಿಸಲು ಇರುವ ಅಡೆತಡೆಗಳೇನು ;

(ಉ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರು ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಬಡ್ತಿ ಸಿಗದೇ ನಿರಾಶಾದಾಯಕ ಸ್ಥಿತಿ ತಲುಪಿದರೂ ಬಡ್ತಿ ನೀಡದಿರಲು ಕಾರಣಗಳೇನು ?

## ೨೦೧೬–೧೭ ಹಾಗೂ ೨೦೧೭–೧೮ ನೇ ಸಾಲಿನಲ್ಲಿ ಹೊಸ ವೋಲ್ವೊ ಬಸ್‌ಗಳ ಖರೀದಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೩ (೪೧೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ ಹಾಗೂ ೨೦೧೭–೧೮ ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ವೊಲ್ವೊ ಬಸ್‌ಗಳನ್ನು ಖರೀದಿಸಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಖರೀದಿ ಪ್ರಕ್ರಿಯೆಯ ವಿವರಗಳನ್ನು (ಟೆಂಡರ್/ ಒಡಬಂಡಿಕೆಯ) ಪ್ರತಿಗಳನ್ನು ಒದಗಿಸುವುದು;

(ಇ) ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆಯ ನಡುವೆಯೂ ಹೊಸ ಬಸ್ಸುಗಳ ಖರೀದಿ ಅವಶ್ಯಕತೆ ಇದೆಯೇ;

(ಈ) ಹಳೆ ಬಸ್ಸುಗಳನ್ನು ಸಂಚಾರದಿಂದ ಹಿಂತೆಗೆದುಕೊಳ್ಳಲು ಕ್ರಮ ವಹಿಸಲಾಗಿದೆಯೇ?

## ೨೦೧೩–೧೪ ರಿಂದ ೨೦೧೭–೧೮ ರವರೆಗೆ ಹಾವೇರಿ ಜಿಲ್ಲೆಗೆ ಸಾರಿಗೆ ಇಲಾಖೆಯ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೩೪ (೪೨೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩-೧೪ ರಿಂದ ೨೦೧೭-೧೮ ನೇ ಸಾಲಿನವರೆಗೆ ಸಾರಿಗೆ ಇಲಾಖೆಯಿಂದ ಹಾವೇರಿ ಜಿಲ್ಲೆಗೆ ಮೂಲಭೂತ ಸೌಕರ್ಯಕ್ಕಾಗಿ ವಿವಿಧ ಯೋಜನೆಗಳಡಿಯಲ್ಲಿ ವಿವಿಧ ಕಾಮಗಾರಿಗಳಿಗಾಗಿ ಬಂದ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಯಾವ ಯಾವ ಯೋಜನೆಗಳಲ್ಲಿ, ಯಾವ ಯಾವ ಕಾಮಗಾರಿಗಳು ಹಾಗೂ ಮೂಲಭೂತ ಸೌಕರ್ಯ ಪೂರ್ಣಗೊಂಡಿದೆ; ಚಾಲ್ತಿಯಲ್ಲಿರುವ ಕಾಮಗಾರಿಗಳು ಹಾಗೂ ಮೂಲಭೂತ ಸೌಕರ್ಯಗಳೆಷ್ಟು; ಇವುಗಳಿಗೆ ಖರ್ಚಾದ ಅನುದಾನ ಎಷ್ಟು; ಬಾಕಿ ಇರುವ ಕಾಮಗಾರಿಗಳು ಮತ್ತು ಅನುದಾನವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹಾವೇರಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಬಸ್ ಡಿಪೋಗಳು ಇವೆ; ಇವುಗಳಲ್ಲಿ ಒಟ್ಟು ಎಷ್ಟು ಬಸ್‌ಗಳಿವೆ; ಇವುಗಳಲ್ಲಿ ಅವಧಿ ಮುಗಿದ ಬಸ್ ಎಷ್ಟು; ಯಾವ ಯಾವ ಬಸ್ ಡಿಪೋಗಳು ಲಾಭದಾಯಕವಾಗಿವೆ; (ವರ್ಷವಾರು, ಡಿಪೋವಾರು ವಿವರ ನೀಡುವುದು)

(ಈ) ಹಾವೇರಿ ಜಿಲ್ಲೆ, ಶಿಗ್ಗಾಂವ್ ತಾಲ್ಲೂಕಿನ ಬಸ್ ಡಿಪೋ ನಿರ್ಮಾಣ ಮಾಡಲು ಸರ್ಕಾರ ನಿರ್ಧರಿಸಿದೆಯೇ: ನಿರ್ಧರಿಸಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ಮತ್ತು ಎಲ್ಲಿ ಪ್ರಾರಂಭಿಸಲಾಗುವುದು? (ವಿವರ ನೀಡುವುದು)

## ರಾಜ್ಯದಲ್ಲಿ ಮೂಲಭೂತ ಸೌಲಭ್ಯಕ್ಕಾಗಿ ಕೇಂದ್ರ ಬಿಡುಗಡೆ ಮಾಡಿದ ಅನುದಾನದ ವಿವರ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೩೫ (೪೨೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೂಲಭೂತ ಸೌಲಭ್ಯ ಅಭಿವೃದ್ಧಿಗಾಗಿ ಕಳೆದ ೪ ವರ್ಷಗಳಲ್ಲಿ ಕೇಂದ್ರ ಸರ್ಕಾರ ಮಂಜೂರು ಮಾಡಿದ ಮತ್ತು ಬಿಡುಗಡೆ ಮಾಡಿದ ಅನುದಾನವೆಷ್ಟು; ರಾಜ್ಯ ಸರ್ಕಾರ ಕಾಯ್ದಿರಿಸಿದ ಮತ್ತು ಖರ್ಚು ಮಾಡಿದ ಅನುದಾನವೆಷ್ಟು;

(ಆ) ಮೂಲಭೂತ ಸೌಲಭ್ಯದ ಅಭಿವೃದ್ಧಿಗಾಗಿ ಕಳೆದ ೫ ವರ್ಷದಲ್ಲಿ ಹಾವೇರಿ ಜಿಲ್ಲೆಯಲ್ಲಿ ಸರ್ಕಾರ ಕೈಗೊಂಡ ಯೋಜನೆಗಳಾವುವು; (ಯೋಜನೆಯ ಅನುದಾನ–ಪ್ರಗತಿಯ ವರ್ಷವಾರು ವಿವರ ನೀಡುವುದು)

(ಇ) ಹಾವೇರಿ ಜಿಲ್ಲೆಯ ಶಿಗ್ಗಾಂವ್ ತಾಲ್ಲೂಕಿನ ಮೂಲಭೂತ ಸೌಲಭ್ಯದ ಅಭಿವೃದ್ಧಿಗಾಗಿ ಸರ್ಕಾರ ಯಾವ ಯೋಜನೆ ಹಮ್ಮಿಕೊಂಡಿದೆ;

(ಈ) ಮುಂದಿನ ಸಾಲಿನಲ್ಲಿ ಯಾವ್ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಹಾವೇರಿ ಜಿಲ್ಲೆಗೆ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೩೬ (೪೨೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩-೧೪ ರಿಂದ ೨೦೧೭-೧೮ನೇ ಸಾಲಿನವರೆಗೆ ಹಾವೇರಿ ಜಿಲ್ಲೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಿಂದ ಯಾವ ಯಾವ ಯೋಜನೆಗಳಲ್ಲಿ ಯಾವ ಯಾವ ಮೂಲಭೂತ ಸೌಕರ್ಯಕ್ಕಾಗಿ ಹಾಗೂ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನ ಬಂದಿದೆ; (ವರ್ಷವಾರು, ಯೋಜನಾವಾರು, ಅನುದಾನದ ಮೂಲಭೂತ ಸೌಕರ್ಯವಾರು ಕಾಮಗಾರಿಗಳ ವಿವರ ಹಾಗೂ ಶಿಗ್ಗಾಂವ್-ಸವಣೂರು ವಿಧಾನಸಭಾ ಕ್ಷೇತ್ರದ ಪ್ರತ್ಯೇಕ ವಿವರ ನೀಡುವುದು)

(ಆ) ಇವುಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು ಎಷ್ಟು; ಕಾಮಗಾರಿಗಳು ಯಾವುವು, ಮತ್ತು ಎಷ್ಟು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ; ಚಾಲ್ತಿಯಲ್ಲಿರುವ ಮೂಲಭೂತ ಸೌಕರ್ಯಗಳು ಹಾಗೂ ಇವುಗಳಲ್ಲಿ ಬಾಕಿ ಇರುವ ಕಾಮಗಾರಿಗಳು ಎಷ್ಟು; ಬಾಕಿ ಉಳಿಯಲು ಕಾರಣವೇನು; ಇದಕ್ಕೆ ತಗಲಿರುವ ವೆಚ್ಚ ಎಷ್ಟು; ಬಾಕಿಯಿರುವ ಅನುದಾನ ಎಷ್ಟು ? (ವರ್ಷಾವಾರು, ಯೋಜನೆವಾರು, ಮೂಲಭೂತ ಸೌಕರ್ಯವಾರು, ಅನುದಾನವಾರು ಕಾಮಗಾರಿಗಳ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು ಹಾಗೂ ಶೀಗ್ಗಾಂಗ್ ಕ್ಷೇತ್ರದ ಪ್ರತ್ಯೇಕ ವಿವರ ನೀಡುವುದು)

## ೨೦೧೩-೧೪ ರಿಂದ ೨೦೧೭-೧೮ರವರೆಗೆ ಹಾವೇರಿ ಜಿಲ್ಲೆಯ ಉನ್ನತ ಶಿಕ್ಷಣ ಇಲಾಖೆಗೆ ಬಂದ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೩೩೭ (೩೯೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩–೧೪ ರಿಂದ ೨೦೧೭–೧೮ರವರೆಗೆ ಹಾವೇರಿ ಜಿಲ್ಲೆಯ ಉನ್ನತ ಶಿಕ್ಷಣ ಇಲಾಖೆಗೆ ಯಾವ ಯಾವ ಯೋಜನೆಗಳಡಿಯಲ್ಲಿ ಯಾವ ಯಾವ ಕಾಮಗಾರಿಗಳಿಗೆ ಯಾವ ಯಾವ ಮೂಲ ಸೌಕರ್ಯಕ್ಕಾಗಿ ಎಷ್ಟೆಷ್ಟು ಅನುದಾನ ಬಿಡುಗಡೆಯಾಗಿದೆ; (ವರ್ಷವಾರು, ಯೋಜನಾವಾರು, ತಾಲ್ಲೂಕುವಾರು ಕಾಮಗಾರಿಗಳ ಮೂಲಭೂತ ಸೌಕರ್ಯವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಎಷ್ಟು ಕಾಮಗಾರಿಗಳು ಮತ್ತು ಮೂಲಭೂತ ಸೌಕರ್ಯಗಳು ಪೂರ್ಣಗೊಂಡಿವೆ; ಚಾಲ್ತಿಯಲ್ಲಿರುವ ಕಾಮಗಾರಿಗಳು ಯಾವುವು; ಬಾಕಿ ಇರುವ ಕಾಮಗಾರಿಗಳು ಹಾಗೂ ಮೂಲಭೂತ ಸೌಕರ್ಯಗಳು ಎಷ್ಟು? (ವರ್ಷವಾರು ತಾಲ್ಲೂಕುವಾರು, ಯೋಜನೆವಾರು ಮೂಲಭೂತ ಸೌಕರ್ಯಗಳವಾರು ಸಂಪೂರ್ಣ ವಿವರ ನೀಡುವುದು ಹಾಗೂ ಶಿಗ್ಗಾಂವ್ ವಿಧಾನಸಭಾ ಕ್ಷೇತ್ರದ ಪ್ರತ್ಯೇಕ ವಿವರ ನೀಡುವುದು)

## ರಾಜ್ಯದ ಅನುದಾನಿತ ಬಿ.ಎಡ್. ಕಾಲೇಜುಗಳಲ್ಲಿ ನಿವೃತ್ತಿಯಾದ ಸಿಬ್ಬಂದಿಗೆ "ಗಳಿಕೆ ರಜೆ" ವೇತನ ಬಿಡುಗಡೆ ಮಾಡುವ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರು (ಪದವೀಧರರ ಕ್ಷೇತ್ರ) :–**

೩೩೮ (೩೦೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅನುದಾನಿತ ಶಿಕ್ಷಣ ಮಹಾವಿದ್ಯಾಲಯಗಳಲ್ಲಿ (ಬಿ.ಎಡ್. ಕಾಲೇಜುಗಳಲ್ಲಿ) ಸೇವೆ ಸಲ್ಲಿಸಿ ೨೦೧೬ರ ನಂತರ ನಿವೃತ್ತಿ

ಹೊಂದಿದ ಸಿಬ್ಬಂದಿಗಳಿಗೆ ಇದುವರೆಗೂ “ಗಳಿಕೆ ರಜೆ” ವೇತನ ಬಿಡುಗಡೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿಯವರುಗಳಿಗೆ ಯಾವಾಗ “ಗಳಿಕೆ ರಜೆ” ವೇತನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಪ್ರವಾಸೋದ್ಯಮ ಸ್ಥಳಗಳಿಗೆ ಸಾರಿಗೆ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೯ (೩೫೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ಪ್ರವಾಸಿ ಸ್ಥಳಗಳಾದ ಶ್ರೀ ಕ್ಷೇತ್ರ ತಲಕಾವೇರಿ, ಅಬ್ಬಿಫಾಲ್ಸ್, ಇರ್ಪು ಫಾಲ್ಸ್, ನಾಗರಹೊಳೆ, ದುಬಾರೆ, ಚೇಲಾವರ ಫಾಲ್ಸ್ ಮತ್ತು ನಾಲ್ಕು ನಾಡು ಅರಮನೆ ಮುಂತಾದ ಸ್ಥಳಗಳಿಗೆ ಹೋಗಲು ಸಾರಿಗೆ ವ್ಯವಸ್ಥೆಯನ್ನು ಮಾಡಲಾಗಿದೆಯೇ;

(ಆ) ಮಾಡಲಾಗಿದ್ದರೆ, ಯಾವ ಯಾವ ನಿಗಧಿತ ಸಮಯಕ್ಕೆ ಸರ್ಕಾರಿ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ; ಮಾಹಿತಿ ನೀಡುವುದು;

(ಇ) ಕೊಡಗಿನ ಪ್ರವಾಸಿ ಸ್ಥಳಗಳಲ್ಲಿ ಕೆಲವು ಸ್ಥಳಗಳಿಗೆ ಸಾರಿಗೆ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸಾರಿಗೆ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

# ರಾಜ್ಯದಲ್ಲಿನ ಶಾಲೆಗಳ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಅನುದಾನ ನೀಡುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೧ (೩೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ಹೊಸದಾಗಿ ಮಂಜೂರಾದ ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಅವುಗಳಾವುವು; (ವಿವರ ನೀಡುವುದು)

(ಆ) ಈ ಹೊಸ ಶಾಲೆಗಳಿಗೆ ಕಟ್ಟಡ ನಿರ್ಮಾಣ ಮಾಡಿರುವ ಶಾಲೆಗಳೆಷ್ಟು; ಕಟ್ಟಡ ನಿರ್ಮಾಣವಾಗದಿರುವ ಶಾಲೆಗಳೆಷ್ಟು; ಕಟ್ಟಡ ನಿರ್ಮಾಣ ಮಾಡಿ ಅರ್ಧಕ್ಕೆ ನಿಂತಿರುವ ಶಾಲೆಗಳೆಷ್ಟು;

(ಇ) ಸರ್ಕಾರಿ ಪ್ರಾಥಮಿಕ ಶಾಲೆಗಳ ಕಟ್ಟಡದಲ್ಲಿ ನಡೆಯುತ್ತಿರುವ ಸರ್ಕಾರಿ ಪ್ರೌಢ ಶಾಲೆಗಳೆಷ್ಟು;

(ಈ) ಸರ್ಕಾರಿ ಪ್ರೌಢ ಶಾಲೆಗಳಿಗೆ ಕಟ್ಟಡ ಕಟ್ಟಲು ಜಾಗವಿಲ್ಲದೆ ಬಾಡಿಗೆ ಅಥವಾ ಪ್ರಾಥಮಿಕ ಶಾಲೆಗಳಲ್ಲಿ ನಡೆಯುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು;

(ಉ) ಕೊಡಗು ಜಿಲ್ಲೆಯಲ್ಲಿ ಸಮರ್ಪಕ ಕೊಠಡಿಗಳು ಇಲ್ಲದೆ ಇರುವ ಸರ್ಕಾರಿ ಪ್ರೌಢ ಶಾಲೆಗಳೆಷ್ಟು? (ಶಾಲೆಯು ಸ್ಥಳಗಳ ಹೆಸರುಗಳೊಂದಿಗೆ ವಿವರ ನೀಡುವುದು)

## ಸರ್ಕಾರಿ ಪ್ರೌಢ ಶಾಲೆಗಳಿಗೆ ಕೊಠಡಿಗಳ ನಿರ್ಮಾಣದ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೧ (೩೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರೌಢ ಶಾಲೆಗಳಿಗೆ ಕೊಠಡಿ ನಿರ್ಮಾಣಕ್ಕಾಗಿ ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅನುದಾನವೆಷ್ಟು;

(ಆ) ಕಳೆದ ೫ ವರ್ಷಗಳಲ್ಲಿ ಹೊಸದಾಗಿ ಮಂಜೂರಾದ ಸರ್ಕಾರಿ ಪ್ರೌಢ ಶಾಲೆಗಳಿಗೆ ಕೊಠಡಿ ನಿರ್ಮಾಣಕ್ಕಾಗಿ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯ ಕೆಲವು ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕೊಠಡಿಗಳ ಕೊರತೆಯಿಂದ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಿರುವ ಕಾರಣ ಸರ್ವ ಶಿಕ್ಷಣ ಅಭಿಯಾನ ಮತ್ತು ಆರ್.ಎಂ.ಎಸ್.ಎ ಯೋಜನೆಯಡಿ ಕೊಠಡಿ ನಿರ್ಮಾಣ ಮಾಡಲು ನಿಯಮದಲ್ಲಿ ಅವಕಾಶವಿಲ್ಲದಿರುವ ಕಾರಣ ಅಂತಹ ಪ್ರಕರಣಗಳಲ್ಲಿ ಕೊಠಡಿ ನಿರ್ಮಾಣ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಈ) ಕೊಡಗು ಜಿಲ್ಲೆಯಲ್ಲಿನ ಕೆಲವು ಸರ್ಕಾರಿ ಪ್ರೌಢ ಶಾಲೆಗಳು ಪ್ರಾಥಮಿಕ ಶಾಲೆ ಕಟ್ಟಡಗಳಲ್ಲಿ ನಡೆಯುತ್ತಿದ್ದು, ಅಂತಹ ಕೊಠಡಿಗಳು

ದುಸ್ಥಿತಿಯಲ್ಲಿದ್ದು, ದುರಸ್ಥಿಯಾಗದೇ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಯಾವ ಕ್ರಮ ತೆಗೆದುಕೊಳ್ಳಲಾಗುವುದು? (ಮಾಹಿತಿ ನೀಡುವುದು)

## ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕರೆ ತರುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೨ (೩೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೭–೧೮ನೇ ಸಾಲಿನಲ್ಲಿ ಗುರ್ತಿಸಲಾದ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯ ವಾಹಿನಿಗೆ ತಂದು ಶಿಕ್ಷಣ ನೀಡಲು ಸರ್ಕಾರ ಯಾವ ರೀತಿಯ ಕ್ರಮವನ್ನು ಈಗಾಗಲೇ ಕೈಗೊಂಡಿದೆ;

(ಇ) ಅಂತಹ ಮಕ್ಕಳನ್ನು ಶಾಲೆಗೆ ದಾಖಲು ಮಾಡಿದ್ದಲ್ಲಿ, ಅವರುಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಸೌಲಭ್ಯಗಳೇನು;

(ಈ) ಈ ವಿಚಾರವಾಗಿ ಪ್ರಸಕ್ತ ಸಾಲಿನಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 'ಡಿ' ಗ್ರೂಪ್ ನೌಕರರನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೪೩ (೩೦೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಈ ಕಾಲೇಜುಗಳಿಗೆ 'ಡಿ' ಗ್ರೂಪ್ ಹುದ್ದೆಗಳು ಮಂಜೂರಾಗಿವೆಯೇ; ಹಾಗಿದ್ದಲ್ಲಿ, ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಈ ಕಾಲೇಜುಗಳಲ್ಲಿ ಕಳೆದ ಹತ್ತಾರು ವರ್ಷಗಳಿಂದ ಕಡಿಮೆ ವೇತನಕ್ಕೆ ದುಡಿಯುತ್ತಿರುವ ಅರೆಕಾಲಿಕ 'ಡಿ' ಗ್ರೂಪ್ ನೌಕರರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಕಳೆದ ಹತ್ತಾರು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿರುವ ಈ ನೌಕರರನ್ನು ಆಯಾಯ ಕಾಲೇಜುಗಳಲ್ಲಿಯೇ ಖಾಯಂ ಮಾಡಲು ಸರ್ಕಾರ ಆಲೋಚಿಸಿದೆಯೇ;

(ಉ) ಆಲೋಚಿಸಿದ್ದಲ್ಲಿ, ಖಾಯಂ ಮಾಡಲಾಗುವುದು ಯಾವಾಗ?

## ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಅರ್ಹ ಬೋಧಕ ಸಿಬ್ಬಂದಿಗಳಿಗೆ 'ಕೆರಿಯರ್ ಅಡ್ವಾನ್ಸ್' ಯೋಜನೆಯಡಿಯಲ್ಲಿ ಪದೋನ್ನತಿ ನೀಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೪೪ (೩೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಾಂತ್ರಿಕ ಶಿಕ್ಷಣ ಇಲಾಖೆಯ ಅರ್ಹ ಭೋಧಕ ಸಿಬ್ಬಂದಿಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಲ್ಲಿ ವೃತ್ತಿ ಪದೋನ್ನತಿ ಸೌಲಭ್ಯ ನೀಡಲು ಅವಕಾಶ ಇದೆಯೇ;

(ಆ) ಇದ್ದಲ್ಲಿ, ಈ ಬಗ್ಗೆ ಅರ್ಹ ಬೋಧಕ ಸಿಬ್ಬಂದಿಗಳಿಗೆ ವೃತ್ತಿ ಪದೋನ್ನತಿಯನ್ನು ನೀಡಲಾಗುತ್ತಿದೆಯೇ;

(ಇ) ಈ ರೀತಿ ಪದೋನ್ನತಿಗೆ ಅನುಮೋದನೆ ಕೋರಿ ಮಂಡ್ಯ ಜಿಲ್ಲೆಯಲ್ಲಿರುವ ಪಿ.ಇ.ಎಸ್. ಕಾಲೇಜ್ ಆಫ್ ಇಂಜನಿಯರಿಂಗ್‌ರವರಿಂದ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ ಬಂದಿದೆ; (ಮಾಹಿತಿ ನೀಡುವುದು)

(ಈ) ಪ್ರಸ್ತಾವನೆ ಬಂದಿದ್ದಲ್ಲಿ, ಈ ಪ್ರಸ್ತಾವನೆಗೆ ಇಲಾಖೆಯವರು ಅನುಮೋದನೆ ನೀಡದಿರಲು ಕಾರಣವೇನು; (ಮಾಹಿತಿ ನೀಡುವುದು)

(ಉ) ಸದರಿ ಕಾಲೇಜಿನ ಪದೋನ್ನತಿ ಪ್ರಸ್ತಾವನೆಗೆ ಅನುಮೋದನೆ ನೀಡಲಾಗುವುದು ಯಾವಾಗ? (ವಿವರ ನೀಡುವುದು)

## U.G.C. ಅರ್ಹತೆಯುಳ್ಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರುಗಳಿಗೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೪೫ (೩೦೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಈ ಕಾಲೇಜುಗಳಲ್ಲಿ ಮಂಜೂರಾಗಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳೆಷ್ಟು; ಇದರಲ್ಲಿ ಭರ್ತಿಯಾದ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು)

(ಇ) ಈ ಹುದ್ದೆಗಳಲ್ಲಿ ನೇರನೇಮಕಾತಿ ಕೋಟಾ ಮತ್ತು ಬಡ್ತಿ ಕೋಟಾದ ಹುದ್ದೆಗಳೆಷ್ಟು; (ವಿವರ ನೀಡುವುದು)

(ಈ) ಯು.ಜಿ.ಸಿ. ಅರ್ಹತೆಯುಳ್ಳ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಸರ್ಕಾರ ಮುಂದಾಗಬಾರದು ಏಕೆ;

(ಉ) ಕೆಲವು ರಾಜ್ಯಗಳಲ್ಲಿ ಯು.ಜಿ.ಸಿ. ಅರ್ಹತೆಯುಳ್ಳ ಉಪನ್ಯಾಸಕರುಗಳಿಗೆ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಅದರಂತೆಯೇ ಯು.ಜಿ.ಸಿ ಅರ್ಹತೆಯುಳ್ಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರನ್ನು ಪ್ರಥಮ ದರ್ಜೆ ಕಾಲೇಜುಗಳಲ್ಲಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡಲು ಇಲಾಖೆಯಿಂದ ಕ್ರಮ ಕೈಗೊಳ್ಳುವುದು ಯಾವಾಗ? (ವಿವರ ನೀಡುವುದು)

## ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳನ್ನು ಪ್ರಾರಂಭಿಸುವ ಕುರಿತು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೪೬ (೩೪೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಖ್ಯೆ ಎಷ್ಟು; ಅವು ಎಲ್ಲೆಲ್ಲಿವೆ; (ವಿವರ ನೀಡುವುದು)

(ಆ) ಸದರಿ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ ನೀಡುವುದು;

(ಇ) ಹಳೆ ಮೈಸೂರು ಭಾಗದಲ್ಲಿ (ಮಂಡ್ಯ, ಮೈಸೂರು, ಹಾಸನ, ಚಾಮರಾಜನಗರ) ಇಲ್ಲಿ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳನ್ನು ಆರಂಭಿಸಲು ಸರ್ಕಾರ ಚಿಂತನೆ ನಡೆಸಿದೆಯೇ;

(ಈ) ಈ ತಾಂತ್ರಿಕ ಯುಗಕ್ಕೆ ಇಂತಹ ಶಾಲೆಗಳ ಅವಶ್ಯಕತೆ ಇದ್ದು, ಇಂತಹ ಶಾಲೆಗಳನ್ನು ಆರಂಭಿಸಲಾಗುವುದು ಯಾವಾಗ?

## ಕಾರವಾರ ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದಿಂದ ಹಾಗೂ ಕೆ.ಆರ್.ಐ.ಡಿ.ಎಲ್. ನಿಂದ ನಡೆಯುವ ಕಾಮಗಾರಿ ಅನಾವಶ್ಯಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೭ (೪೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಕಾರವಾರ ಪಟ್ಟಣದಲ್ಲಿ ನಿರ್ಮಿತಿ ಕೇಂದ್ರದಿಂದ ಹಾಗೂ ಕೆ.ಆರ್.ಐ.ಡಿ.ಎಲ್. ನಿಂದ ಅನೇಕ ಕಾಮಗಾರಿಗಳು ನಡೆಯುತ್ತಿದ್ದು, ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು ಕಟ್ಟಡ ಕಾಮಗಾರಿ ಪೂರ್ಣಗೊಳಿಸದೇ ಇರುವುದರಿಂದ ಸಾರ್ವಜನಿಕರಿಗೆ ಹಾಗೂ ಅಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಕಳೆದ ೫ ವರ್ಷದಿಂದ ನಿರ್ಮಿತಿ ಹಾಗೂ ಕೆ.ಆರ್.ಐ.ಡಿ.ಎಲ್. ನಿಂದ ಯಾವ ಯಾವ ತಾಲ್ಲೂಕಿನಲ್ಲಿ ಯಾವ ಯಾವ ಯೋಜನೆಯಲ್ಲಿ, ಯಾವ ಯಾವ ಕಾಮಗಾರಿ ಮಂಜೂರಾಗಿರುತ್ತದೆ; ಹಾಗೂ ಅದಕ್ಕೆ ಬಂದಿರುವ ಅನುದಾನ ಮತ್ತು ಕಾಮಗಾರಿಯ ಇಂದಿನ ಸ್ಥಿತಿಯನ್ನು ಸವಿಸ್ತಾರ ಮಾಹಿತಿಯೊಂದಿಗೆ ವರದಿ ನೀಡುವುದು; (ಜಿಲ್ಲಾವಾರು, ತಾಲ್ಲಾಕುವಾರು ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ ಹಾಗೂ ಬೇಜವಾಬ್ದಾರಿತನದಿಂದ ಬಹಳಷ್ಟು ಕಾಮಗಾರಿಗಳು ನಿಧಾನಗತಿಯಲ್ಲಿ ಆಗುತ್ತಿರುವುದರಿಂದ ಸರ್ಕಾರದ ಅನುದಾನ ಸರಿಯಾದ ಸಮಯದಲ್ಲಿ ಉಪಯೋಗಿಸದೇ ಇರುವುದರಿಂದ ಅಂತಹವರುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಮಡಿಕೇರಿ ತಾಲ್ಲೂಕಿನ ಮಕ್ಕಂದೂರು ಗ್ರಾಮ ಪಂಚಾಯತ್ ವ್ಯಾಪ್ತಿಯ ಮಕ್ಕಂದೂರು–ತಂತಿಪಾಲ ಲಿಂಕ್ ರಸ್ತೆ ದುರಸ್ತಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೪೮ (೩೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಮಕ್ಕಂದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಕ್ಕಂದೂರು– ತಂತಿಪಾಲ ಲಿಂಕ್ ರಸ್ತೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಯಾವ ಕಾಲಮಿತಿಯೊಳಗೆ ಸದರಿ ರಸ್ತೆಯನ್ನು ಅಭಿವೃದ್ಧಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು?

## ಗ್ರಾಮಗಳಿಗೆ ಬಸ್ ಸೌಲಭ್ಯ ದೊರಕಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೪೯ (೩೪೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಬಸ್ ನಿಲ್ದಾಣ ಸೌಲಭ್ಯ ಸಿಗದಿರುವ ಗ್ರಾಮಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯಾವ ಕಾರಣಗಳಿಂದಾಗಿ ಸದರಿ ಗ್ರಾಮಗಳಿಗೆ ಇದುವರೆವಿಗೂ ಬಸ್ ಸೌಲಭ್ಯ ಕಲ್ಪಿಸಲಾಗಿರುವುದಿಲ್ಲ;

(ಇ) ಯಾವ ಕಾಲಮಿತಿಯೊಳಗೆ ಸದರಿ ಗ್ರಾಮಗಳಿಗೆ ಬಸ್ ಸೌಲಭ್ಯ ಕಲ್ಪಿಸಲಾಗುವುದು?

## ಬೀದರ್ ಜಿಲ್ಲೆಯ ಗ್ರಾಮಗಳಿಗೆ ಕುಡಿಯುವ ನೀರಿನ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೦ (೪೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸದ್ಯ ಎಷ್ಟು ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉದ್ಭವಿಸಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನೀರಿನ ಸಮಸ್ಯೆ ಇರುವ ಗ್ರಾಮಕ್ಕೆ ನೀರಿನ ಪೂರೈಕೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಬೀದರ್ ಜಿಲ್ಲೆಯಲ್ಲಿ ೨೦೧೬–೧೭, ೨೦೧೭–೧೮ನೇ ಸಾಲಿನಲ್ಲಿ ಕುಡಿಯುವ ನೀರಿನ ಕಾಮಗಾರಿಗಳಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಸಾರಿಗೆ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೧ (೪೨೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಾರಿಗೆ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳ ನೇಮಕಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಜಿಲ್ಲೆಯಲ್ಲಿರುವ ಬಸ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಜಿಲ್ಲೆಯ ನೂರಾರು ಗ್ರಾಮಗಳು ಬಸ್ ಸೌಕರ್ಯಗಳಿಂದ ವಂಚಿತರಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಜಿಲ್ಲೆಯಲ್ಲಿರುವ ಮಿನಿಬಸ್ ನಿಲ್ದಾಣಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ನಿರ್ಮಾಣಗೊಂಡಿರುವ ಬಸ್ ನಿಲ್ದಾಣಗಳು ಉಪಯೋಗಕ್ಕೆ ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಮೂಡಬಿದ್ರೆಯಲ್ಲಿ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಸ್ಥಾಪನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೫೨ (೩೫೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆಯಲ್ಲಿ ಈವರೆವಿಗೂ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಸ್ಥಾಪಿಸದೇ ಇರಲು ಕಾರಣವೇನು; ಕೂಡಲೇ ಹೊಸ ಬಸ್ ನಿಲ್ದಾಣ ನಿರ್ಮಾಣಕ್ಕೆ ಮಂಜೂರಾತಿ ನೀಡಲು ಕೈಗೊಳ್ಳುವ ಕ್ರಮವೇನು;

(ಆ) ಮಂಗಳೂರಿನಿಂದ ಕೈಕಂಬ ಮಾರ್ಗವಾಗಿ ಕಾರ್ಕಳಕ್ಕೆ ಕೆ.ಎಸ್.ಆರ್.ಟಿ.ಸಿ ಬಸ್ಸು ಸಂಚಾರ ಪ್ರಾರಂಭಿಸಲು ಇಲಾಖೆಗೆ ಬೇಡಿಕೆ ನೀಡಿದ್ದರೂ, ಪೂರೈಸದೇ ಇರಲು ಕಾರಣವೇನು; (ವಿವರ ನೀಡುವುದು)

(ಇ) ತಾಲ್ಲೂಕು ಕೇಂದ್ರವಾಗಿ ಮಾರ್ಪಟ್ಟಿರುವ ಮಂಗಳೂರಿನಿಂದ ಬೆಂಗಳೂರಿಗೆ ಎಷ್ಟು ಕೆ.ಎಸ್.ಆರ್.ಟಿ.ಸಿ ಬಸ್ಸುಗಳು ಸಂಚರಿಸುತ್ತಿವೆ; ಇನ್ನೂ ಹೆಚ್ಚುವರಿ ಬಸ್ಸುಗಳನ್ನು ಓಡಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು; (ಪೂರ್ಣ ವಿವರ ನೀಡುವುದು)

(ಈ) ಮೂಡಬಿದ್ರೆಗೆ ನರ್ಮ್ ಯೋಜನೆಯಡಿ ತಳ ಅಂತಸ್ತು ಬಸ್ಸುಗಳು ಸಂಚರಿಸಲು ಇಲಾಖೆ ಕೂಡಲೇ ಕ್ರಮ ಕೈಗೊಳ್ಳುವುದೇ; ಈ ಬಗ್ಗೆ ತೊಂದರೆ ಏನಾದರೂ ಇದ್ದಲ್ಲಿ, ಪೂರ್ಣ ವಿವರ ನೀಡುವುದು?

## ವಿಶ್ವವಿದ್ಯಾಲಯಗಳಲ್ಲಿ ಕ್ರೀಡಾ ನೀತಿ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೫೩ (೩೫೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಲ್ಲಾ ವಿಶ್ವವಿದ್ಯಾಲಯಗಳ ಮಟ್ಟಗಳಲ್ಲಿ ಕ್ರೀಡಾ ಪ್ರೋತ್ಸಾಹಕ್ಕಾಗಿ ಕ್ರೀಡಾ ನೀತಿಯೊಂದನ್ನು ಜಾರಿಗೆ ತರಬೇಕೆಂಬ ಪ್ರಸ್ತಾವನೆ ಸರ್ಕಾರದ ಯಾವ ಹಂತದಲ್ಲಿದೆ; ಎಷ್ಟು ವಿಶ್ವವಿದ್ಯಾಲಯಗಳಲ್ಲಿ ಕ್ರೀಡಾ ನೀತಿಯನ್ನು ಅನುಷ್ಠಾನಗೊಳಿಸಲಾಗಿದೆ; (ವಿವರ ನೀಡುವುದು)

(ಆ) ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಕ್ರೀಡಾ ಹಾಸ್ಟೆಲ್‌ಗಳನ್ನು ಸ್ಥಾಪಿಸಲಾಗಿದೆ;

(ಇ) ವಿಶ್ವವಿದ್ಯಾಲಯಗಳಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರ್‌ರಾಷ್ಟ್ರೀಯ ಮಟ್ಟಗಳಲ್ಲಿ ಕ್ರೀಡೆಗಳಲ್ಲಿ ಭಾಗವಹಿಸುವವರಿಗೆ ಗ್ರೇಸ್ ಮಾರ್ಕ್ (Grace Marks) ನೀಡಬೇಕೆಂಬ ಬೇಡಿಕೆಯನ್ನು ಇಲಾಖೆ ಪರಿಗಣಿಸಿರುತ್ತದೆಯೇ ಹಾಗೂ ಇದನ್ನು ಕ್ರೀಡಾ ನೀತಿಯಲ್ಲಿ ಅಳವಡಿಸಲಾಗುತ್ತಿದೆಯೇ;

(ಈ) ರಾಜ್ಯದ ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ವಿದೇಶಿ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ? (ವಿವರ ನೀಡುವುದು)

## ರಾಜಧಾನಿಗೆ ಮರಳು ತರಿಸಿಕೊಳ್ಳುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೫೪ (೩೪೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜಧಾನಿಗೆ ಯಾವ ಯಾವ ಜಿಲ್ಲೆಗಳಿಂದ ಮರಳನ್ನು ತರಿಸಲಾಗುತ್ತಿದೆ; ಪ್ರತಿ ಟನ್‌ಗೆ ತಗಲುವ ವೆಚ್ಚವೆಷ್ಟು; (ಪೂರ್ಣ ವಿವರ ನೀಡುವುದು)

(ಆ) ರಾಜಧಾನಿಯಲ್ಲಿ ಮರಳಿನ ಬೇಡಿಕೆ ಎಷ್ಟು; ಬೇಡಿಕೆಗೆ ಅನುಗುಣವಾಗಿ ಮರಳು ಪೂರೈಸಲು ಇಲಾಖೆಯ ಮುಂದಿರುವ ಪ್ರಸ್ತಾವನೆಗಳಾವುವು; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಿಂದ ಬೆಂಗಳೂರಿಗೆ ಯಾವುದೇ ಪರವಾನಿಗೆ ಇಲ್ಲದೆ ಮರಳು ಸಾಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಎಷ್ಟು ಪ್ರಕರಣಗಳು ದಾಖಲಾಗಿವೆ; ಸಂಗ್ರಹಿಸಿದ ದಂಡ ಎಷ್ಟು? (ಪೂರ್ಣ ವಿವರ ನೀಡುವುದು)

## ರಾಜ್ಯದ ಅಲ್ಪಸಂಖ್ಯಾತ ಕಾಲೋನಿಗಳ ಅಭಿವೃದ್ಧಿಗೆ ಅನುದಾನದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೫೫ (೩೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ರಾಜ್ಯದ ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಇದರಲ್ಲಿ ಎಷ್ಟು ಅನುದಾನ ಬಳಕೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿ ಯೋಜನೆಯಡಿಯಲ್ಲಿ ಚರ್ಚ್ ಮತ್ತು ಮಸೀದಿಗಳ ಸಂಪರ್ಕ ರಸ್ತೆ ಹಾಗೂ ಪ್ರಾರ್ಥನಾ ಮಂದಿರಗಳಲ್ಲಿ ಮೂಲಭೂತ ಸೌಕರ್ಯಕ್ಕಾಗಿ ಅನುದಾನ ಬಳಕೆ ಮಾಡಲು ಅವಕಾಶ ಕಲ್ಪಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕೂಡಲೇ ಈ ಬಗ್ಗೆ ಸೂಕ್ತ ಆದೇಶ ಹೊರಡಿಸಲು ಕೈಗೊಳ್ಳುವ ಕ್ರಮವೇನು;

(ಇ) ೨೦೧೬–೧೭ನೇ ಸಾಲಿನಲ್ಲಿ ಮೂಲಭೂತ ಸೌಕರ್ಯಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಬಿಡುಗಡೆ ಮಾಡುವಾಗ ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ; (ವಿವರ ನೀಡುವುದು)

(ಈ) ೨೦೧೬–೧೭ನೇ ಸಾಲಿನಲ್ಲಿ ರಾಜ್ಯದಲ್ಲಿನ ಎಷ್ಟು ಅಲ್ಪಸಂಖ್ಯಾತರ ಶಿಕ್ಷಣಾರ್ಥಿಗಳನ್ನು ವಿದೇಶಗಳಲ್ಲಿ ಶಿಕ್ಷಣ ಪಡೆಯಲು ಆಯ್ಕೆ ಮಾಡಲಾಗಿದೆ? (ಪೂರ್ಣ ವಿವರ ನೀಡುವುದು)

## ಕರಾವಳಿ ಜಿಲ್ಲೆಗಳಿಗೆ ಪ್ರತ್ಯೇಕ ಮರಳು ನೀತಿ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೫೬ (೩೪೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆಗಳಿಗೆ ಪ್ರತ್ಯೇಕವಾದ ಮರಳು ನೀತಿ ಜಾರಿಗೆ ತರುವುದಾಗಿ ಸರ್ಕಾರ ಘೋಷಿಸಿದ್ದು, ಈ ನೀತಿ ಪ್ರಕಟಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣವೇನು;

(ಆ) ಪ್ರಕಟಿಸಿದ್ದಲ್ಲಿ, ಪ್ರತ್ಯೇಕ ಮರಳು ನೀತಿಯು ಪ್ರಮುಖ ಅಂಶಗಳಾವುವು; (ವಿವರ ನೀಡುವುದು)

(ಇ) ಪರವಾನಿಗೆ ನೀಡಲು ಅನುಸರಿಸುತ್ತಿರುವ ಮಾನದಂಡಗಳಾವುವು; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮರಳು ತೆಗೆಯಲು ಎಷ್ಟು ಮಂದಿಗೆ ಪರವಾನಿಗೆ ನೀಡಲಾಗಿದೆ; ಪರವಾನಿಗೆಗಾಗಿ ಎಷ್ಟು ಅರ್ಜಿಗಳು ಜಿಲ್ಲಾಡಳಿತದಲ್ಲಿ ಬಾಕಿ ಇರುತ್ತವೆ; ಹಾಗೂ ಈಗಾಗಲೇ ಪರವಾನಿಗೆ ನೀಡಿರುವವರ ಪಟ್ಟಿ ನೀಡುವುದು?

## ಕಲಬುರಗಿ ಜಿಲ್ಲೆಯ ಸಂಚಾರಿ ಗ್ರಂಥಾಲಯಗಳ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೩೫೭ (೪೧೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಚಾರಿ ಗ್ರಂಥಾಲಯಗಳ ಸಂಖ್ಯೆ ಎಷ್ಟು; ಇಲ್ಲವಾದಲ್ಲಿ, ಸೂಕ್ತ ಕಾರಣ ತಿಳಿಸುವುದು;

(ಆ) ಹೊಸದಾಗಿ ಸಂಚಾರಿ ಗ್ರಂಥಾಲಯಗಳನ್ನು ತೆರೆಯುವ ಯೋಜನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ, ಕಲಬುರಗಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಸಂಚಾರಿ ಗ್ರಂಥಾಲಯಗಳನ್ನು ತೆರೆಯಲು ಯೋಜನೆ ರೂಪಿಸಲಾಗಿದೆ?

## ಹೊರಯಾಲ–ಹೊಸಪುರ ರಸ್ತೆ ರಿಪೇರಿ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫೮ (೩೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗುಂಡ್ಲುಪೇಟೆ ತಾಲ್ಲೂಕು, ಹೊರೆಯಾಲ–ಹೊಸಪುರ ರಸ್ತೆಯು ತೀವ್ರವಾಗಿ ಹದಗೆಟ್ಟು ಗುಂಡಿಬಿದ್ದು ವಾಹನ ಹಾಗೂ ಜನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರಸ್ತೆಯಲ್ಲಿ ಬರುವ ಹೊಣಕನಪುರದ ಓಂಕಾರೇಶ್ವರ ದೇವಾಲಯಕ್ಕೆ ಹೋಗುವ ಭಕ್ತಾದಿಗಳಿಗೂ ಇದರಿಂದ ತೊಂದರೆಯಾಗಿದ್ದು, ಕೂಡಲೇ ಈ ರಸ್ತೆಯನ್ನು ದುರಸ್ಥಿಗೊಳಿಸಲು ಕ್ರಮ ಜರುಗಿಸಲಾಗುವುದೇ;

(ಇ) ಈ ರಸ್ತೆಯನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ? (ವಿವರ ನೀಡುವುದು)

## ಚಾಮರಾಜನಗರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿರುವ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪೯ (೩೬೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿಗೆ ಮಂಜೂರಾಗಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಭರ್ತಿಯಾಗಿರುವ ಮತ್ತು ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ಪ್ರತಿಯೊಂದು ವಿಭಾಗದ ಹುದ್ದೆಯ ವಿವರಗಳನ್ನು ಒದಗಿಸುವುದು)

(ಆ) ಬೋಧಕೇತರ ಸಿಬ್ಬಂದಿ ಕೊರತೆ ಲ್ಯಾಬ್‌ಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಅನಾನೂಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಬಸ್ ಸೌಲಭ್ಯ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೦ (೩೬೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಖಾಸಗಿ ವಾಹನಗಳ ಸಂಚಾರ ನಿರ್ಬಂಧಿಸಿರುವುದರಿಂದ ಪ್ರವಾಸಿಗರಿಗೆ ಮತ್ತು ಯಾತ್ರಿಕರಿಗೆ ಅನಾನುಕೂಲವಾಗಿರುವುದು ಹಾಗೂ ಸಂಕ್ರಾಂತಿ ಹಬ್ಬದ ಮಾರನೆ ದಿನ ಹತ್ತು ಸಾವಿರ ಜನರು ಬೆಟ್ಟಕ್ಕೆ ಹೋಗಲು ಬಂದು, ಬಸ್ ಸೌಲಭ್ಯ ಇಲ್ಲದೆ ಬಹಳ ತೊಂದರೆಗೆ ಒಳಗಾಗಿ ಪ್ರತಿಭಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಗುಂಡ್ಲುಪೇಟೆಯಿಂದ ಮತ್ತು ಹಂಗಳದಿಂದ ಪ್ರವಾಸಿಗರು ಮತ್ತು ಯಾತ್ರಿಕರ ಅನುಕೂಲಕ್ಕಾಗಿ ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ವಾರಾಂತ್ಯದಲ್ಲಿ (ಶನಿವಾರ ಮತ್ತು ಭಾನುವಾರ) ಹೆಚ್ಚಿನ ಸಂಖ್ಯೆಯಲ್ಲಿ ಮತ್ತು ದಿನನಿತ್ಯದಲ್ಲಿ ನಿಯಮಿತ ವೇಳೆಯಲ್ಲಿ ಮಿನಿಬಸ್‌ಗಳ ಸೌಲಭ್ಯ ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದೇ; ಈ ಬಗ್ಗೆ ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಮತ್ತು ಮೈಸೂರು, ಗುಂಡ್ಲುಪೇಟೆ ಬಸ್ ನಿಲ್ದಾಣಗಳಲ್ಲಿ ವಿವರಗಳನ್ನು ದೊಡ್ಡದಾಗಿ ಪ್ರಕಟಿಸಲು ಕ್ರಮ ಜರುಗಿಸಲಾಗುವುದೆ?

## ವೃಂದ ಮತ್ತು ನೇಮಕಾತಿ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೧ (೩೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯಿತಿ ಗ್ರೇಡ್–೨/ಗ್ರೇಡ್–೧ ಕಾರ್ಯದರ್ಶಿ, ಪಿ.ಡಿ.ಓ., ಸಹಾಯಕ ನಿರ್ದೇಶಕರು, ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಹುದ್ದೆಗಳಿಗೆ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ ೧೩೦ ಸೇವಿಡಿ ೨೦೦೭, ದಿನಾಂಕ:೦೮–೧೦–೨೦೦೭ರನ್ವಯ ವೃಂದ ಮತ್ತು ನೇಮಕಾತಿ ನಿಯಮಗಳು/ತಿದ್ದುಪಡಿಗಳು ರಚನೆಯಾದ ಕುರಿತು ಸಂಪೂರ್ಣ ವಿವರ ನೀಡುವುದು;

(ಆ) ೧೯೯೪ ರಿಂದ ೨೦೧೭ರವರೆಗೆ ವರ್ಷಾವಾರು ರಾಜ್ಯದ ಎಲ್ಲಾ ಜಿಲ್ಲಾ–ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿ ಗ್ರೇಡ್–೨/ ಗ್ರೇಡ್–೧ ಕಾರ್ಯದರ್ಶಿ, ಪಿ.ಡಿ.ಓ ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮದಂತೆ ಒಟ್ಟು ಲಭ್ಯವಾಗುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಅವಧಿಯಲ್ಲಿ ನೇರ ನೇಮಕಾತಿ ಹಾಗೂ ಬಡ್ತಿ ಮಾಡಲಾದ ಹುದ್ದೆಗಳ ಸಂಖ್ಯೆ ಎಷ್ಟು; ನೇರ ನೇಮಕಾತಿ ಮತ್ತು ಬಡ್ತಿ ಕೋಟಾದಲ್ಲಿ ಹೆಚ್ಚುವರಿ ಅಥವಾ ಕಡಿಮೆಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ? (ಪ್ರವರ್ಗವಾರು ಸಂಪೂರ್ಣ ಮಾಹಿತಿ ನೀಡುವುದು)

## ವಿದೇಶಿ ಮರಳಿನ ಖರೀದಿ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೨ (೩೭೨) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದೇಶಗಳಿಂದ Natural Sand/Construction Sand ಖರೀದಿಗೆ ಟೆಂಡರ್ ಕರೆಯಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು;

(ಆ) ಕರೆಯಲಾದ ಟೆಂಡರ್‌ನಲ್ಲೇನಾದರೂ ತಿದ್ದುಪಡಿ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಅದರ ವಿವರ ಹಾಗೂ ತಿದ್ದುಪಡಿ ಆದೇಶದ ಪ್ರತಿ ಒದಗಿಸುವುದು;

(ಇ) ಅಂತರ್‌ರಾಷ್ಟ್ರೀಯ ಮರಳು ಮಾರುಕಟ್ಟೆಯ ಸರ್ವೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಅದರ ವಿವರ ಹಾಗೂ ಸರ್ವೆ ಪ್ರತಿ ಹಾಗೂ ಇಲಾಖಾ ವರದಿ ನೀಡುವುದು;

(ಈ) ಟೆಂಡರ್ ಶೆಡ್ಯೂಲ್‌ನ ವಿವರ, ಬಿಡ್‌ದಾರರ ವಿವರ ಹಾಗೂ ಕಾರ್ಯಾದೇಶ ನೀಡಿದ್ದರ ವಿವರಗಳ ಸಂಪೂರ್ಣ ವಿವರ ನೀಡುವುದು;

(ಉ) ಮರಳು ಗುಣಮಟ್ಟ ಕುರಿತು ಸೂಕ್ತ ತಜ್ಞರ ಸಲಹೆ ಪಡೆಯಲಾಗಿದೆಯೇ; ಪಡೆದಿದ್ದಲ್ಲಿ, ತಜ್ಞರ ಸಲಹೆಯ ಅನುಮೋದನೆ ಪ್ರತಿ ನೀಡುವುದು;

(ಊ) ಮರಳು ಖರೀದಿ ನಂತರ ಮಾರಾಟಕ್ಕಾಗಿ ಅಥವಾ ಸರಬರಾಜಿಗಾಗಿ ಸರ್ಕಾರವು ಮಾಡಿರುವ ವ್ಯವಸ್ಥೆಗಳೇನು? (ಸಂಪೂರ್ಣ ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳ ಕಟ್ಟಡಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೩ (೩೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಿಂದ ಹೊಸದಾಗಿ ರಚನೆಯಾದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ಹಾಗೂ ಹಾಲಿ ಇರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ೩ ಜಿಲ್ಲೆಗಳ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡಗಳ ವ್ಯವಸ್ಥೆ ಇದೆಯೇ; ಇಲ್ಲವಾದಲ್ಲಿ, ಬಾಡಿಗೆ ಕಟ್ಟಡಗಳಲ್ಲಿ ಯಾವ ಯಾವ ಗ್ರಾಮ ಪಂಚಾಯಿತಿಗಳು ಕಾರ್ಯನಿರ್ವಹಿಸುತ್ತಿವೆ; ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸೂಕ್ತ ಸ್ಥಳ ನಿಗಧಿಪಡಿಸಲಾಗಿದೆಯೇ; (ವಿವರ ನೀಡುವುದು)

(ಇ) ಸದರಿ ೩ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಗ್ರಾಮ ಪಂಚಾಯಿತಿಗಳ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಎಷ್ಟು ಅನುದಾನ ಮೀಸಲಿಡಲಾಗಿತ್ತು; ಎಷ್ಟು ಖರ್ಚಾಗಿದೆ; ಯಾವ ಗ್ರಾಮ ಪಂಚಾಯಿತಿಗಳ ಸ್ವಂತ ಕಟ್ಟಡಗಳಿಗಾಗಿ ಹಣ ವೆಚ್ಚವಾಗಿದೆ? (ವರ್ಷಾವಾರು ವಿವರ ನೀಡುವುದು)

## ಗ್ರಾಮ ವಿಕಾಸ ಯೋಜನೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೪ (೩೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ಗ್ರಾಮಗಳನ್ನು ಗ್ರಾಮ ವಿಕಾಸ ಯೋಜನೆಯಡಿಯಲ್ಲಿ ಆಯ್ಕೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಆಯ್ಕೆಯಾದ ಗ್ರಾಮಗಳಿಗೆ ಕಳೆದ ೩ ವರ್ಷಗಳಿಂದ ಈವರೆಗೆ ಬಿಡುಗಡೆ ಮಾಡಿರುವ ಹಣ ಎಷ್ಟು; (ವರ್ಷಾವಾರು, ಗ್ರಾಮವಾರು ವಿವರ ನೀಡುವುದು)

(ಇ) ಗ್ರಾಮ ವಿಕಾಸ ಯೋಜನೆಗೆ ಗ್ರಾಮಗಳನ್ನು ಆಯ್ಕೆ ಮಾಡಲು ಸರ್ಕಾರ ಅನುಸರಿಸುವ ಮಾನದಂಡಗಳೇನು; ಈ ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳು ಯಾವುವು? (ಸಂಪೂರ್ಣ ವಿವರ ನೀಡುವುದು)

## ಕಾಮಗಾರಿಗಳ ಮಂಜೂರಾತಿ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೫ (೩೭೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಳೆದ ೩ ವರ್ಷಗಳಲ್ಲಿ ಮಂಜೂರಾಗಿರುವ ಕಾಮಗಾರಿಗಳು ಯಾವುವು ; ಮಂಜೂರಾತಿ ನೀಡಿದ್ದು ಯಾವಾಗ ; (ಕಾಮಗಾರಿವಾರು, ವರ್ಷವಾರು, ಅಂದಾಜು ವೆಚ್ಚದೊಂದಿಗೆ ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಿಂದ ಈವರೆಗೆ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಈವರೆಗೆ ಖರ್ಚು ಮಾಡಿದ ಅಂದಾಜು ವೆಚ್ಚ ಎಷ್ಟು ? (ಕಾಮಗಾರಿವಾರು, ವರ್ಷವಾರು ವಿವರ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0278/800 ಪ್ರತಿಗಳು/05–02–2018